ಸಂಪುಟ : 10 ಸಂಚಿಕೆ: 189 ಪುಟ : 4+2 ಬೆಲೆ: 3.00 ಗುರುವಾರ ಸೆಪ್ಟೆಂಬರ್ 04 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 189 Pages : 4+2 Price : 3.00 Thursday September 04 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ರಾಹುಲ್ ಗಾಂಧಿ ಮಾತೆಯರ ಕ್ಷಮೆ ಕೇಳಲಿ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಹುಲ್ ಗಾಂಧಿ ನೇತೃತ್ವದಲ್ಲಿ ಬಿಹಾರದಲ್ಲಿ ನಡೆಸಿದ್ದ ಓಟರ್ ಅಧಿಕಾರ ಯಾತ್ರೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತ ಎನ್ನಲಾದ ವ್ಯಕ್ತಿಯೊಬ್ಬ ಮೋದಿರವರ ತಾಯಿಯ ವಿರುದ್ಧ ಅವಾಚ್ಯ ಪದಗಳಲ್ಲಿ ನಿಂದಿಸಿದ್ದು, ರಾಹುಲ್ ಗಾಂಧಿ ಸಮ್ಮುಖದಲ್ಲಿಯೇ ನಡೆದ ಘಟನೆಯಾಗಿದೆ. ಇತ್ತೀಚೆಗೆ ರಾಹುಲ್ ಗಾಂಧಿ ಬೇಜವಾಬ್ದಾರಿಯ ಹೇಳಿಕೆ ನೀಡುತ್ತಾ ದೇಶದ ಜನರ ಎದುರು ಸಣ್ಣವರಾಗಿ ವರ್ತಿಸುತ್ತಿದ್ದಾರೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ವಿಶ್ವವೇ ಕೊಂಡಾಡುತ್ತಿರುವ ದೇಶದ ಹೆಮ್ಮೆಯ ಪ್ರಧಾನಮಂತ್ರಿಗಳು ದೇಶ ಅಭಿವೃದ್ಧಿ, ದೇಶದ ಪ್ರಗತಿಗೆ ಕೊಡುಗೆ ನೀಡುತ್ತಿದ್ದಾರೆ. ಮೋದಿಯವರ ಆಳ್ವಿಕೆಯಲ್ಲಿ ಭಾರತ ಇಂದು ಸ್ವಾವಲಂಬಿ ದೇಶವಾಗಿ, ಆರ್ಥಿಕ ಸದೃಢ ದೇಶವಾಗಿ ಬಲಿಷ್ಠವಾಗಿದೆ. ಇದನ್ನು ಸಹಿಸಲಾರದ ರಾಹುಲ್ ಗಾಂಧಿ ನಿಂದಿಸಿದ್ದು ಮೋದಿಜೀರವರ ತಾಯಿಗಷ್ಟೆ ಅಲ್ಲ, ಈ ಅವಮಾನ ಇಡೀ ದೇಶದ ತಾಯಂದಿರಿಗೆ ಮಾಡಿದ ಅವಮಾನವಾಗಿದೆ. ತಕ್ಷಣ ರಾಹುಲ್ ಗಾಂಧಿ ದೇಶದ ಎಲ್ಲ ಮಹಿಳೆಯರ ಕ್ಷಮೆ ಕೇಳಬೇಕು. ಇಲ್ಲವಾದರೆ ಮಾತೆಯರ ನಿಂದನಾ ಶಾಪ ರಾಹುಲ್ ಗಾಂಧಿಗೆ ತಟ್ಟಲಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಕ್ರೀಡಾ ಮನೋಭಾವನೆ ಬೆಳೆಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡೆಯಲ್ಲಿ ಸೋಲು-ಗೆಲುವು ಮುಖ್ಯವಲ್ಲ. ಕ್ರೀಡೆಯಲ್ಲಿ ಪಾಲ್ಗೊಂಡು ಸೋಲು-ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸುವ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಿವಿಮಾತು ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ವತಿಯಿಂದ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಕ್ರೀಡಾ ಧ್ವಜಾರೋಹಣ ನೆರವೇರಿಸಿ, ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಲೂಕು ಮಟ್ಟದಿಂದ ಆಯ್ಕೆಯಾಗಿ ಜಿಲ್ಲಾ ಮಟ್ಟದಲ್ಲಿ ಪಾಲ್ಗೊಳ್ಳಲು ಕ್ರೀಡಾಪಟುಗಳು ಆಗಮಿಸಿದ್ದು, ರಾಜ್ಯ ಮಟ್ಟದ ದಸರಾ ಕ್ರೀಡಾಕೂಟದಲ್ಲಿಯೂ ಪಾಲ್ಗೊಂಡು ಗದಗ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಜಿಲ್ಲಾಧಿಕಾರಿಗಳು ಆಶಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಗದಗ ಜಿಲ್ಲೆಯ ಕ್ರೀಡಾಪಟುಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿದ್ದಾರೆ. ಹಾಕಿ ಕ್ರೀಡೆಯಲ್ಲಿ ರಾಜು ಬಗಾಡೆ, ಕುಸ್ತಿಯಲ್ಲಿ ಪ್ರೇಮಾ ಹುಚ್ಚಣ್ಣವರ, ಸೈಕ್ಲಿಂಗ್‌ನಲ್ಲಿ ಮಲ್ಲಿಗವಾಡ ರಾಷ್ಟ್ರೀಯ ಮಟ್ಟದಲ್ಲಿ ಸ್ಥಾನ ಪಡೆದಿದ್ದಾರೆ. ಸ್ವತಃ ನನ್ನ ಸಹೋದರಿ ದಾಕ್ಷಾಯಣಿ ಅಸೂಟಿ ಅವರೂ ಕೂಡ ಈ ಹಿಂದೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ 1500 ಮೀ, 3000 ಮೀ ಓಟದಲ್ಲಿ ಕ್ರೀಡಾ ಪ್ರಶಸ್ತಿ ತಂದಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ರಾಜ್ಯ ಮಟ್ಟದಲ್ಲಿಯೂ ಗದಗ ಜಿಲ್ಲೆಯ ಕೀರ್ತಿ ಹೆಚ್ಚಿಸಿ ಹೆಸರು ತರಬೇಕೆಂದರು.

ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಹಾಗೂ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕ್ರೀಡಾ ಜ್ಯೋತಿ ಸ್ವೀಕರಿಸಿದರು.




ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಿರ್ದೇಶಕ ಡಾ. ಶರಣು ಗೋಗೇರಿ ಸರ್ವರನ್ನೂ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳು ಸೆಪ್ಟೆಂಬರ್ 3 ಹಾಗೂ 4ರಂದು ಎರಡು ದಿನಗಳ ಕಾಲ ಜರುಗುತ್ತಿವೆ. ಗದಗ ಜಿಲ್ಲೆಯ ಕ್ರೀಡಾಪಟುಗಳು ರಾಜ್ಯ ಮಟ್ಟದ ದಸರಾ ಕ್ರೀಡಾಕೂಟದಲ್ಲಿಯೂ ಪಾಲ್ಗೊಂಡು ಜಿಲ್ಲೆಗೆ ಕೀರ್ತಿ ತರಬೇಕೆಂದರು.

ಕಾರ್ಯಕ್ರಮದಲ್ಲಿ ಅಂತಾರಾಷ್ಟ್ರೀಯ ಕುಸ್ತಿಪಟು ಪ್ರೇಮಾ ಹುಚ್ಚಣ್ಣವರ, ವಾಸು ಕಲಕಂಬಿ, ರಂಜಿತ ಚವ್ಹಾಣ ಸೇರಿದಂತೆ ದೈಹಿಕ ಶಿಕ್ಷಕರು, ಕ್ರೀಡಾಪಟುಗಳು ಹಾಜರಿದ್ದರು.

ಕೆ.ಕೆ.ಪಿ.ಪಿ.ಜಿ ಸಂಗೀತ ಪಾಠಶಾಲೆ ವಿದ್ಯಾರ್ಥಿಗಳು ನಾಡಗೀತೆ ಪ್ರಸ್ತುತಪಡಿಸಿದರು. ಎಂ.ಎಂ. ಯರಗುಡಿ ಕಾರ್ಯಕ್ರಮ ನಿರೂಪಿಸಿದರು. ಶಿರಹಟ್ಟಿ ಸಹಾಯಕ ಯುವಜನ ಕ್ರೀಡಾಧಿಕಾರಿ ಎಂ.ಡಿ. ತಳ್ಳಳ್ಳಿ ವಂದಿಸಿದರು.

### ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಅಂಜನಾದ್ರಿ ಕ್ಷೇತ್ರದ ಅಭಿವೃದ್ಧಿ ಕುರಿತು ಸಭೆ

# ಅಂಜನಾದ್ರಿ ಅಭಿವೃದ್ಧಿಗೆ ಕ್ರಮ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅಂಜನಾದ್ರಿ ಬೆಟ್ಟವನ್ನು ಪ್ರವಾಸೋದ್ಯಮ, ಪೌರಾಣಿಕ ಹಾಗೂ ಅಧ್ಯಾತ್ಮಿಕ ಮಹತ್ವವನ್ನು ತಿಳಿಸುವ ರೀತಿಯಲ್ಲಿ ಅಭಿವೃದ್ಧಿಪಡಿಸಬೇಕು. ಹನುಮ ಜಯಂತಿ ಸಂದರ್ಭದಲ್ಲಿ ಲಕ್ಷಾಂತರ ಭಕ್ತರು ಬೆಟ್ಟಕ್ಕೆ ಭೇಟಿ ನೀಡುತ್ತಾರೆ. ಉತ್ತರ ಭಾರತದ ಪ್ರವಾಸಿಗರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಕ್ಷೇತ್ರಕ್ಕೆ ಭೇಟಿ ನೀಡುತ್ತಾರೆ. ಯಾತ್ರಿಕರು ಉಳಿದುಕೊಳ್ಳಲು ಡಾರ್ಮೆಟರಿ ವ್ಯವಸ್ಥೆ, ಹಿರಿಯ ಭಕ್ತಾಧಿಗಳು ಬೆಟ್ಟವೇರಲು ಅನುಕೂಲವಾಗುವಂತೆ ಮೆಟ್ಟಿಲುಗಳ ವ್ಯವಸ್ಥೆ, ಸಮುದಾಯ ಭವನ ನಿರ್ಮಾಣ ಹಾಗೂ ಇತರ ಪ್ರವಾಸಿ ಸೌಲಭ್ಯಗಳು ಸೇರಿ ಕ್ಷೇತ್ರದ ಸುತ್ತಮುತ್ತ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅಂಜನಾದ್ರಿ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಕಾವೇರಿ ನಿವಾಸದಲ್ಲಿ ಬುಧವಾರ ನಡೆದ ಸಭೆಯಯಲ್ಲಿ ಅವರು ಮಾತನಾಡುತ್ತಿದ್ದರು.

ಸದರಿ ಕ್ಷೇತ್ರಕ್ಕೆ ಹಂತ-1 ಮತ್ತು ಹಂತ-2ರಲ್ಲಿ 200 ಕೋಟಿ ರೂ.ಗಳ ಕಾಮಗಾರಿಗಳು ಮಂಜೂರಾಗಿದ್ದು, ಈವರೆಗೆ ಸದರಿ ಕಾಮಗಾರಿಗಳಿಗೆ 10 ಕೋಟಿ ರೂ.ಗಳನ್ನು ಇಲಾಖೆಯಿಂದ ಬಿಡುಗಡೆ ಮಾಡಲಾಗಿದೆ. ಬಾಕಿ ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯಿಂದ ಹೆಚ್ಚುವರಿ ಅನುದಾನ ಒದಗಿಸಬೇಕಿದೆ ಎಂದರು.

**ಅಂಜನಾದ್ರಿ ಬೆಟ್ಟಕ್ಕೆ ರೋಪ್ ವೇ**

2024-25ನೇ ಸಾಲಿನ ಆಯವ್ಯಯ ಘೋಷಣೆಯಂತೆ ಅಂಜನಾದ್ರಿ ಬೆಟ್ಟವೂ ಒಳಗೊಂಡಂತೆ ರಾಜ್ಯದ 11 ಪ್ರವಾಸಿ ತಾಣಗಳಿಗೆ ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ರೋಪ್ ವೇಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಅನುಮೋದನೆ ನೀಡಿದೆ.

ಮಂಜೂರಾಗಿರುವ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರಿ ಜಮೀನಿನ ಕೊರತೆಯಿದೆ. ಪ್ರಸಾಪಿಸಿರುವ 77.28 ಎಕರೆ ಖಾಸಗಿ ಜಮೀನನ್ನು ಅನುದಾನದ ಕೊರತೆಯಿರುವುದರಿಂದ ಈವರೆಗೂ ಭೂ-ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಾಗಿಲ್ಲ. ಆದ್ದರಿಂದ, ಹೆಚ್ಚುವರಿ ಜಮೀನು ಒಳಗೊಂಡಂತೆ ಒಟ್ಟು 101-30 ಎಕರೆ ಖಾಸಗಿ ಜಮೀನು ಭೂಸ್ವಾಧೀನಪಡಿಸಿಕೊಳ್ಳಲು ಅಗತ್ಯವಿರುವ ಅನುದಾನವನ್ನು ಆರ್ಥಿಕ ಇಲಾಖೆಯಿಂದ ಒದಗಿಸಬೇಕಿದೆ ಎಂದರು. ಮಂಜೂರಾಗಿರುವ ಬಹುತೇಕ ಕಾಮಗಾರಿಗಳನ್ನು ಅರಣ್ಯ ಇಲಾಖೆಯ ವ್ಯಾಪ್ತಿಗೆ ಬರುವ ಜಮೀನುಗಳಲ್ಲಿ ಕೈಗೊಳ್ಳಬೇಕಿರುವುದರಿಂದ, ಈ ಎಲ್ಲಾ ಕಾಮಗಾರಿಗಳನ್ನು ಕೈಗೊಳ್ಳಲು ಅರಣ್ಯ ಇಲಾಖೆಯ NOC ನೀಡಬೇಕಿದ್ದು, ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದರು.

ಸಭೆಯಲ್ಲಿ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಸೇರಿದಂತೆ ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸ್ವಚ್ಛತೆ ಪ್ರತಿಯೊಬ್ಬರ ವೈಯಕ್ತಿಕ ಜವಾಬ್ದಾರಿ



■ ವಿಜಯಸಾಕ್ಷಿ ಸುದ್ದಿ, ರೋಣ

ಸ್ವಚ್ಛ ಭಾರತ ಮಿಷನ್ ಅಡಿ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆಯ ಅರಿವು ಮೂಡಿಸುವ ಅಭಿಯಾನಕ್ಕೆ ರೋಣ ತಾಲೂಕಿನಲ್ಲಿ ಮತ್ತಷ್ಟು ವೇಗ ಸಿಕ್ಕಿದೆ. ಈ ಹಿನ್ನೆಲೆಯಲ್ಲಿ ರೋಣ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಹೊಳೆ ಆಲೂರು ಗ್ರಾಮಕ್ಕೆ ಭೇಟಿ ನೀಡಿ ಅಭಿಯಾನದಲ್ಲಿ ಭಾಗವಹಿಸಿ ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಿದರು.

ಹೊಳೆ ಆಲೂರ ಗ್ರಾಮದಲ್ಲಿನ ಅಂಗಡಿ ಮುಂಗಟ್ಟುಗಳಿಗೆ ಭೇಟಿ ನೀಡಿ ಸ್ವಚ್ಛತೆಯನ್ನು ಪರಿಶೀಲಿಸಿದರು. ಸ್ವಚ್ಛತಾ ವಾಹನಗಳ ಮೂಲಕ ಸರಿಯಾದ ಕಸ ವಿಲೇವಾರಿ ವಿಧಾನ, ಕುಡಿಯುವ ನೀರಿನ ಗುಣಮಟ್ಟ ಕಾಪಾಡುವಿಕೆ ಹಾಗೂ ಪ್ಲಾಸ್ಟಿಕ್ ನಿಷೇಧದ ಬಗ್ಗೆ ವ್ಯಾಪಾರಿಗಳು ಮತ್ತು ಗ್ರಾಹಕರಿಗೆ ಅರಿವು ನೀಡಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರು, ಅಂಗಡಿ ಮಾಲೀಕರು ಹಾಗೂ ಪಂಚಾಯಿತಿ ಸಿಬ್ಬಂದಿಗಳು ಸಕ್ರಿಯವಾಗಿ ಪಾಲ್ಗೊಂಡು ಕಸ ವಿಲೇವಾರಿಯ ವಿಧಾನಗಳನ್ನು ಪ್ರಾಯೋಗಿಕವಾಗಿ ಕಲಿತುಕೊಂಡರು. ಅಧಿಕಾರಿಗಳು ಕುಡಿಯುವ ನೀರಿನ ಮಾದರಿ ಪರೀಕ್ಷೆ ಹಾಗೂ ಶುದ್ಧತೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ವಿವರಿಸಿದರು. ಗ್ರಾಮ ಪಂಚಾಯತಿ ಕಚೇರಿಗೆ ಭೇಟಿ ನೀಡಿದ ಅವರು, ಸಾಮಾಜಿಕ ಲೆಕ್ಕ ಪರಿಶೋಧನೆ, ಸ್ಥಳೀಯ ಲೆಕ್ಕ ಪರಿಶೋಧನೆ, ಮನರೇಗಾ ಯೋಜನೆಯಡಿ ಉದ್ಯೋಗ ಸೃಷ್ಟಿ, ಸಿಬ್ಬಂದಿಗಳ ಹಾಜರಾತಿ ಸೇರಿದಂತೆ ವಿವಿಧ ವಿಷಯಗಳ ಪ್ರಗತಿಯನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ್ ಗಿರಿತಮ್ಮನ್ನವರ ಸೇರಿದಂತೆ ಸಿಬ್ಬಂದಿಗಳು ಹಾಜರಿದ್ದರು.

# ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದ ಸಂಸ್ಥಾಪನಾ ದಿನ




■ ವಿಜಯಸಾಕ್ಷಿ ಸುದ್ದಿ, ಗದಗ

ಸಪ್ತ ಪರ್ವಗಳ ಸಪ್ತಾಶ್ವವನ್ನು ಏರಿ ಸನ್ಮಾರ್ಗ ಪಥದತ್ತ ಚಲಿಸಿ ಸದ್ಯ 8ನೇ ವರ್ಷದತ್ತ ಹೆಜ್ಜೆಗಳನ್ನು ಊರುತ್ತ ಗದಗ-ಬೆಟಗೇರಿಯ ಶೈಕ್ಷಣಿಕ ಕ್ಷೇತ್ರದಲ್ಲಿ ತನ್ನದೇ ಆದ ವಿಶಿಷ್ಟ ಸ್ಥಾನವನ್ನು ಪಡೆದ ಸ್ಟುಡೆಂಟ್ಸ್ ಎಜುಕೇಶನ್ ಸಂಸ್ಥೆಯ ಈ ಗಮನಾರ್ಹ ಉನ್ನತಿಗೆ ಸಹಾಯ, ಸಹಕಾರ, ಪ್ರೋತ್ಸಾಹ ನೀಡುತ್ತಾ ಅಭಿಮಾನದ ಹೊಳೆ ಹರಿಸಿದ ಎಲ್ಲ ವಿದ್ಯಾರ್ಥಿ ವೃಂದ, ಪಾಲಕರು, ಆಡಳಿತ ವರ್ಗ, ಉಪನ್ಯಾಸಕ ಮತ್ತು ಬೋಧಕೇತರ ಸಿಬ್ಬಂದಿಯ ಪ್ರಾಮಾಣಿಕ, ಶ್ರದ್ಧಾಪೂರ್ವಕ ಸೇವಾ ತಾತ್ಪರತೆಯೇ ಕಾರಣ ಎಂದು ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಹೇಳಿದರು.

ಸನ್ಮಾರ್ಗ ಕಾಲೇಜಿನ 8ನೇ ವರ್ಷದ ಸಂಸ್ಥಾಪನಾ ದಿನದ ಸಮಾರಂಭದಲ್ಲಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಾಧಕರನ್ನು ಸಮಾಜಕ್ಕೆ ನೀಡುವ, ಆ ಮೂಲಕ ಸಂಸ್ಥೆಯ ಮೂಲ ಉದ್ದೇಶವಾದ ವಿದ್ಯಾರ್ಥಿಗಳ ಸರ್ವಾಂಗೀಣ ಪ್ರಗತಿಯನ್ನು ಸಾಧಿಸುವ ಆಸೆಯನ್ನು ಸಂಸ್ಥೆ ಹೊಂದಿದೆ ಎಂದರು.

ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡಿ, ಸಂಸ್ಥೆ ಅಥವಾ ವಿದ್ಯಾಲಯ ಅಭಿವೃದ್ಧಿ ಸಾಧಿಸುವಲ್ಲಿ ಆಡಳಿತ ವರ್ಗದ ಜೊತೆಗೆ ಸರ್ವರ ಪ್ರೋತ್ಸಾಹ, ಸಹಕಾರ ಅಗತ್ಯ ಎಂದರು.

ಸಮಾರಂಭದಲ್ಲಿ ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ ಹಾಗೂ ನಿರ್ದೇಶಕ ಪ್ರೊ. ರಾಹುಲ ಒಡೆಯರ್, ಪ್ರೊ. ರೋಹಿತ್ ಒಡೆಯರ್, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯ್ಯದ್ ಮತೀನ್ ಮುಲ್ಲಾ ಹಾಗೂ ಕಾಲೇಜಿನ ಸಮಸ್ತ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕನ್ನಡ ಭಾಷಾ ಉಪನ್ಯಾಸಕ ಹೇಮಂತ್ ದಳವಾಯಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರೆ, ಪ್ರೊ. ಶಿವಕುಮಾರ ವಜ್ರಬಂಡಿ ವಂದಿಸಿದರು.

### ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಮಹರ್ಷಿ ವಾಲ್ಮೀಕಿ ಸಾಧನೆಗಳ ಪರಿಚಯವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅಚ್ಚುಕಟ್ಟಾಗಿ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಬುಧವಾರ ಜರುಗಿದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶ್ರೀ ಮಹರ್ಷಿ ವಾಲ್ಮೀಕಿಯವರ ಸಾಧನೆಗಳ ಕುರಿತು ಮುಂದಿನ ಪೀಳಿಗೆಗೆ ತಿಳಿಸಿಕೊಡುವಂತೆ ಆಗಬೇಕು. ಹಾಗಾಗಿ ಸಮಾಜ ಇಲಾಖೆ ಸಹಯೋಗದೊಂದಿಗೆ ಶ್ರೀ ಮಹರ್ಷಿ ವಾಲ್ಮೀಕಿ ಅವರ ಕುರಿತ ಸಣ್ಣ ಕಥೆಗಳ ಬರವಣಿಗೆಯ ಸ್ಪರ್ಧೆ ಏರ್ಪಡಿಸಿ, ಆಯ್ದ ಕಥೆಗಳನ್ನು ಸಂಕಲನದಲ್ಲಿ ಪ್ರಕಟಿಸುವಂತೆ ಹೇಳಿದರು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಸಮುದಾಯದ ವಿದ್ಯಾರ್ಥಿಗಳು, ಸಾಹಿತಿಗಳು, ಪಿಎಚ್‌ಡಿ ಮಾಡಿದ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸಲಾಗುವುದು. ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಲು ವಾಲ್ಮೀಕಿ ಅವರ ಕುರಿತು ಸುದೀರ್ಘವಾಗಿ ಅಧ್ಯಯನ ಮಾಡಿದ ಇಬ್ಬರು ಸಂಪನ್ಮೂಲ ವ್ಯಕ್ತಿಗಳ ಹೆಸರುಗಳನ್ನು ತಿಳಿಸಲು ಸಮುದಾಯದ ಮುಖಂಡರಿಗೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ನಂದಾ ಹನಬರಟ್ಟಿ ಮಾತನಾಡಿ, ಪ್ರತಿ ವರ್ಷದಂತೆ ಶ್ರೀ ವಾಲ್ಮೀಕಿ ಜಯಂತಿಯಂದು ಪರಿಶಿಷ್ಟ ಪಂಗಡದ ಏಳಿಗಾಗಿ ಶ್ರಮಿಸಿದ ಪರಿಶಿಷ್ಟ ಪಂಗಡಕ್ಕೆ ಸೇರಿದ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ ಹಾಗೂ ಇನ್ನಿತರ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಅಕ್ಟೋಬರ್ 7ರಂದು ಜರುಗುವ ರಾಜ್ಯ ಮಟ್ಟದ ಶ್ರೀ ವಾಲ್ಮೀಕಿ ಜಯಂತಿಯಂದು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ನೀಡಲಾಗುತ್ತದೆ. ಈ ಪ್ರಶಸ್ತಿಗಾಗಿ ಸೆಪ್ಟಂಬರ್ 10ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಭೆಗೆ ತಿಳಿಸಿದರು. ಸಮುದಾಯದ ಮುಖಂಡರು ಮಾತನಾಡಿ, ಭೀಷ್ಮ ಕೆರೆಯ ಹತ್ತಿರುವಿರುವ ವೃತ್ತಕ್ಕೆ ಮಹರ್ಷಿ ವಾಲ್ಮೀಕಿ ಅವರ ಹೆಸರನ್ನು ನೇಮಕ ಮಾಡಲಾಗಿದ್ದು, ಅದನ್ನು ಅಭಿವೃದ್ಧಿಪಡಿಸಬೇಕು. ಜಯಂತಿ ದಿನದಂದು ಮೆರವಣಿಗೆಗೆ ಕಲಾವಿದರ ತಂಡವನ್ನು ಒದಗಿಸಿಕೊಡಬೇಕು. ಜಿಲ್ಲೆಯಲ್ಲಿ ಶ್ರೀ ವಾಲ್ಮೀಕಿ ಭವನಗಳ ಕಾಮಗಾರಿಗಳು ಚುರುಕುಗೊಳ್ಳಬೇಕು ಎಂದು ಸಭೆಗೆ ತಿಳಿಸಿದರು.

ಇದನ್ನು ಆಲಿಸಿದ ಜಿಲ್ಲಾಧಿಕಾರಿಗಳು, ಶ್ರೀ ಮಹರ್ಷಿ ವಾಲ್ಮೀಕಿ ವೃತ್ತಕ್ಕೆ ಸಂಬಂಧಿಸಿದಂತೆ ಇನ್ನುಳಿದ ಸಮಸ್ಯೆಗಳನ್ನು ಚರ್ಚಿಸಲು ಮತ್ತೊಂದು ಸಭೆ ನಡೆಸಲಾಗುವುದು ಎಂದು ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ ಕೆ.ಆರ್, ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಎಸಿ ಗಂಗಪ್ಪ, ಜಿಲ್ಲಾಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಶ್ರೀ ವಾಲ್ಮೀಕಿ ಸಮುದಾಯದ ಮುಖಂಡರು ಹಾಗೂ ಪರಿಶಿಷ್ಟ ವರ್ಗ, ಪರಿಶಿಷ್ಟ ಜಾತಿ ಗಣ್ಯರು, ಸಂಘ-ಸಂಸ್ಥೆಯ ಪದಾಧಿಕಾರಿಗಳು ಪಾಲ್ಗೊಂಡು ಶ್ರೀ ವಾಲ್ಮೀಕಿ ಜಯಂತಿ ಆಚರಣೆಯ ಕುರಿತು ಸಲಹೆ-ಸೂಚನೆಗಳನ್ನು ನೀಡಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಸಹಯೋಗದೊಂದಿಗೆ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸರ್ಕಾರ ನಿಗದಿ ಮಾಡಿದ ದಿನದಂದು ಜಿಲ್ಲಾಡಳಿತ ಭವನದಲ್ಲಿ ಸಾಂಕೇತಿಕವಾಗಿ ಆಚರಿಸಲಾಗುವುದು. ಮುಂದೆ ಸಮುದಾಯದವರು ತೀರ್ಮಾನಿಸಿದಂತೆ ನಗರದ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿ ಜಯಂತಿ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

## ಎಚ್ಚರ ಜನರೇ..ಶೂ, ಚಪ್ಪಲಿ ಧರಿಸುವ ಮುನ್ನ ಹುಷಾರ್!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಶೂ, ಚಪ್ಪಲಿ ಧರಿಸುವ ಮುನ್ನ ನೀವು ಕೊಂಚ ಜಾಗರೂಕರಾಗಿರಿ. ಬೆಂಗಳೂರಿನಲ್ಲಿ ಹಾವುಗಳು ಶೂ, ಚಪ್ಪಲಿಗಳಲ್ಲಿ ಸೇರಿಕೊಳ್ಳುತ್ತಿರುವ ಘಟನೆ ಹೆಚ್ಚುತ್ತಿದೆ. ಗಮನಿಸದೇ ಶೂ ಧರಿಸಿದ ಇಬ್ಬರು ಇತ್ತೀಚಿಗೆ ಸಾವನ್ನಪ್ಪಿದ್ದು, ಮತ್ತಷ್ಟು ಆತಂಕ ಹೆಚ್ಚಿಸಿದೆ.

ಸೆ.2ರ ಮಂಗಳವಾರ ಬೆಳಿಗ್ಗೆ ಮಾರತ್‌ಹಳ್ಳಿ ಬಳಿ ಮನೆಯಿಂದ ಹೊರ ಬಂದು ಶೂ ಹಾಕಲು ಹೋದ ಓರ್ವ ವ್ಯಕ್ತಿ ಒಂದು ಕ್ಷಣ ಗಾಬರಿಯಾದರು. ಆ ಶೂ ಒಳಗೆ ನಾಗರಹಾವಿತ್ತು. ಶೂ ಒಳಭಾಗದಲ್ಲೇ ಹೆಡೆ ಎತ್ತಿ ಆತಂಕ ಮೂಡಿಸಿತ್ತು.

ಮಳೆ ಕಾರಣದಿಂದಾಗಿ ಹಾವುಗಳು ಬೆಚ್ಚಗಿನ ಜಾಗವನ್ನು ಅರಸಿ ಬಂದಿರುತ್ತವೆ. ಶೂ, ಚಪ್ಪಲಿಗಳು ತುಂಬಾ ಬೆಚ್ಚಗಿರುವುದರಿಂದ ಇವುಗಳಲ್ಲಿ ಸೇರಿರುತ್ತವೆ.

ಇದೇ ರೀತಿ ಬೆಂಗಳೂರಿನಲ್ಲಿ ಮೂರೇ ದಿನದಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ. ರಾಜ್ಯದಲ್ಲಿ ಜನವರಿ 1ರಿಂದ ಆಗಸ್ಟ್ 17ರ ತನಕ 13,494 ಹಾವು ಕಡಿತ ಪ್ರಕರಣ ದಾಖಲಾಗಿವೆ. ಮಳೆಗಾಲ ಇರೋದ್ರಿಂದ ಹಾವುಗಳು ಬೆಚ್ಚನೆಯ ಸ್ಥಳ ಹುಡುಕಿ ಬರೋದು ಸಹಜ. ಹೀಗಾಗಿ ನೀವು ಹೊರಗೆ ಹೋಗೋ ಮುನ್ನಾ ಶೂ, ಚಪ್ಪಲಿ ಒಮ್ಮೆ ಚೆಕ್ ಮಾಡಿ ಧರಿಸೋದು ಉತ್ತಮ.

## ಬೆಂಗಳೂರಿನ ಹಲವೆಡೆ ಧಾರಾಕಾರ ಮಳೆ: ವಾಹನ ಸವಾರರು ಪರದಾಟ, ಜನಜೀವನ ಅಸ್ತವ್ಯಸ್ತ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನ ಹಲವೆಡೆ ಬುಧವಾರ ಸಂಜೆ ಭಾರೀ ಮಳೆ ಆಗಿದ್ದು, ಕೆಲಸ ಮುಗಿಸಿ ಮನೆಗೆ ಹೊರಟವರಿಗೆ ವರುಣ ಕಾಟ ಕೊಟ್ಟಿದ್ದಾನೆ.

ನಗರದ ಪ್ಯಾಲೇಸ್ ರಸ್ತೆ, ಮೇಖ್ರಿ ಸರ್ಕಲ್, ರಾಜಭವನ, ವಿಧಾನಸೌಧ, ಆನಂದ್ ರಾವ್ ಸರ್ಕಲ್, ಕಾರ್ಪೋರೇಷನ್, ಟೌನ್ ಹಾಲ್, ಲಾಲ್ ಬಾಗ್, ಶಾಂತಿನಗರ ಸೇರಿದಂತೆ ಹಲವೆಡೆ ಭಾರೀ ಮಳೆಯಾಗಿದೆ.

ಮಳೆಯಿಂದಾಗಿ ಹಲವೆಡೆ ಪವರ್ ಕಟ್ ಆಗಿದೆ. ರಸ್ತೆಯಲ್ಲಿ ನೀರು ನಿಂತಿದ್ದರಿಂದ ವಾಹನ ಸಂಚಾರ ಕಷ್ಟವಾಯಿತು. ರಸ್ತೆ ಗುಂಡಿಗಳು ಕಾಣದೇ ವಾಹನ ಸವಾರರು ಒದ್ದಾಟ ನಡೆಸಿದರು. ಮಳೆಯಿಂದಾಗಿ ಟ್ರಾಫಿಕ್ ಜಾಮ್ ಕೂಡ ಆಗಿತ್ತು. ಸಂಜೆ ಕೆಲಸ ಮುಗಿಸಿ ಬೇಗ ಮನೆಗೆ ಸೇರಬೇಕು ಅಂದುಕೊಂಡು ಹೊರಟಿದ್ದವರಿಗೆ ಮಳೆರಾಯ ಶಾಕ್ ಕೊಟ್ಟನು. ಭಾರೀ ಮಳೆಯಿಂದಾಗಿ ಬೆಂಗಳೂರಿನ ಜನ ಜೀವನ ಅಸ್ತವ್ಯಸ್ತಗೊಂಡಿದೆ.

### ಸೆಪ್ಟೆಂಬರ್ 5, ಶಿಕ್ಷಕರ ದಿನಾಚರಣೆ ನಿಮಿತ್ತ ವಿಶೇಷ ಲೇಖನ

# 'ಗುರು' ಸನ್ನಡತೆ ರೂಪಿಸುವ ಹರಿಕಾರ

ನಮ್ಮ ದೇಶದ ಶಿಕ್ಷಣ ವ್ಯವಸ್ಥೆಗೆ ಅಮೂಲ್ಯ ಕೊಡುಗೆ ನೀಡಿದ ಶ್ರೇಷ್ಠ ಶಿಕ್ಷಕರು, ಶಿಕ್ಷಣ ತಜ್ಞರು ಹಾಗೂ ಮಾಜಿ ರಾಷ್ಟ್ರಪತಿಗಳಾದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನವನ್ನು ದೇಶಾದ್ಯಂತ ಶಿಕ್ಷಕರ ದಿನವಾಗಿ ಆಚರಿಸಲಾಗುತ್ತಿದೆ. ಸುಂದರ ಸಮಾಜದ ನಿರ್ಮಾತೃಗಳನ್ನು ಸೃಷ್ಟಿಸುವ ತೋಟದ ಮಾಲೀಕರೆ ನಮ್ಮ ಶಿಕ್ಷಕರು. ಸಮಾಜದ ಪ್ರತಿಯೊಬ್ಬ ಸಾಧಕನ ಹಿಂದೆಯೂ ಶಿಕ್ಷಕನ ಶ್ರಮ ಇರುತ್ತದೆ. ಮಕ್ಕಳ ಲಾಲನೆ-ಪಾಲನೆಯಲ್ಲಿ ತಾಯಿಯ ಪಾತ್ರ ಎಷ್ಟು ಮುಖ್ಯವೋ, ಮಕ್ಕಳ ಬೌದ್ಧಿಕ ಜ್ಞಾನವನ್ನು ವೃದ್ಧಿಸುವಲ್ಲಿ ಶಿಕ್ಷಕನ ಪಾತ್ರವೂ ಸಹ ಅಷ್ಟೇ ಮುಖ್ಯ.

ಡಾ. ರಾಧಾಕೃಷ್ಣರವರು ಭಾರತದ ಅಗ್ರಗಣ್ಯ, ಶ್ರೇಷ್ಠ ಶಿಕ್ಷಕ. ಅವರು ಭಾರತದ ಮೊದಲ ತತ್ವಜ್ಞಾನಿ ಮತ್ತು ಭಾರತ ರತ್ನ ಪುರಸ್ಕೃತರು. ಅವರು ಎಲ್ಲರೂ ಪ್ರೀತಿಸುವ ಮಹಾನ್ ಶಿಕ್ಷಕರಾಗಿದ್ದರು. ಅವರು 5 ಸೆಪ್ಟೆಂಬರ್ 1888ರಂದು ಮಧ್ಯಮ ವರ್ಗದ ಕುಟುಂಬದಲ್ಲಿ ಜನಿಸಿದರು. ಅವರು ಸ್ವತಂತ್ರ ಭಾರತದ ಮೊದಲ ಉಪರಾಷ್ಟ್ರಪತಿ ಮತ್ತು ಎರಡನೇ ರಾಷ್ಟ್ರಪತಿಯಾಗಿದ್ದರು.

ಸರ್ವಪಲ್ಲಿ ರಾಧಾಕೃಷ್ಣನ್ ಅವರು ಭಾರತದ ಸನಾತನ ಹಿಂದೂ ಧರ್ಮದ ಸಾರ, ವೇದ, ಉಪನಿಷತ್, ಜೈನ




ತತ್ವಜ್ಞಾನ, ಶಂಕರ ರಾಮಾನುಜ, ಮಧ್ವ, ಪ್ಲೇಟೋ, ಪ್ಲಾಟಿನಸ್, ಕಾಂತ್, ಬ್ರ್ಯಾಡ್ಲೆ ಮುಂತಾದ ಮಹನೀಯರ ತತ್ವಜ್ಞಾನವನ್ನು ಆಳವಾಗಿ ಅಧ್ಯಯನ ಕೈಗೊಂಡರು. ಸತತ ಅಧ್ಯಯನ ಮತ್ತು ಕಠಿಣ ಪರಿಶ್ರಮದಿಂದ ಹಂತ ಹಂತವಾಗಿ ಮೇಲೇರುತ್ತಾ ಮುನ್ನಡೆದರು.

ಡಾ.ರಾಧಾಕೃಷ್ಣರವರು 1962-67ರ ಅವಧಿಯಲ್ಲಿ ಭಾರತದ ರಾಷ್ಟ್ರಪತಿಯಾಗಿ ದೇಶಕ್ಕೆ ಸೇವೆ ಸಲ್ಲಿಸುತ್ತಿದ್ದಾಗ, ಅವರ ವಿದ್ಯಾರ್ಥಿಗಳು ಮತ್ತು ಸ್ನೇಹಿತರು ಅವರ ಜನ್ಮದಿನವನ್ನು ಆಚರಿಸಲು ವಿನಂತಿಸಿದರು. ಅದಕ್ಕೆ ಉತ್ತರಿಸಿದ ಅವರು 'ನನ್ನ ಜನ್ಮದಿನವನ್ನು ಆಚರಿಸುವ ಬದಲು, ಸೆಪ್ಟೆಂಬರ್ 5ನ್ನು ಶಿಕ್ಷಕರ ದಿನವನ್ನಾಗಿ ಆಚರಿಸಿದರೆ ಅದು ನನ್ನ ಹೆಮ್ಮೆಯ ಸೌಭಾಗ್ಯ' ಎಂದರು. ಅಂದಿನಿಂದ ಅವರ ಜನ್ಮದಿನವನ್ನು ಶಿಕ್ಷಕರ ದಿನವನ್ನಾಗಿ ಆಚರಿಸಲಾಗುತ್ತಿದೆ.

ಬದುಕಿನಲ್ಲಿ ಸರಿ-ತಪ್ಪು ನಡುವಿನ ವ್ಯತ್ಯಾಸ ತಿಳಿ ಹೇಳುವವರೇ ಗುರು. ಒಂದು ಸುಸಂಸ್ಕೃತ ಸಮಾಜ ರೂಪಿಸುವಲ್ಲಿ ಗುರುವಿನ ಪಾತ್ರ ಪ್ರಮುಖವಾದದ್ದು. ವಿದ್ಯಾರ್ಥಿಗಳನ್ನು ಚೆನ್ನಾಗಿ ಬೆಳೆಸಲು ಶಿಕ್ಷಕರು ವರ್ಷವಿಡೀ ಶ್ರಮಿಸುತ್ತಾರೆ. ಶಿಕ್ಷಕರ ಜೀವನದಲ್ಲಿ ವಿದ್ಯಾರ್ಥಿಗಳು ಯಾವಾಗಲೂ ಮೊದಲ ಸ್ಥಾನದಲ್ಲಿರುತ್ತಾರೆ. ತಮ್ಮ ವಿದ್ಯಾರ್ಥಿಗಳು ವಿಕಸನಗೊಳ್ಳುತ್ತಿದ್ದಾರೆ ಎಂದು ಖಚಿತಪಡಿಸಿಕೊಳ್ಳಲು ಅವರು ತಮ್ಮ ಎಲ್ಲಾ ಪ್ರಯತ್ನಗಳನ್ನು ಮಾಡುತ್ತಾರೆ. ಶಿಕ್ಷಕರ ದಿನವೆಂದರೆ ವಿದ್ಯಾರ್ಥಿಗಳು ತಮ್ಮ ಶಿಕ್ಷಕರಿಗೆ ತಾವು ಮಾಡುವ ಎಲ್ಲದಕ್ಕೂ ಕೃತಜ್ಞತೆಯನ್ನು ವ್ಯಕ್ತಪಡಿಸಬಹುದು.

ಹಿಂದಿನ ಕಾಲದಲ್ಲಿ ಶಿಕ್ಷಕರೇ ವಿದ್ಯಾರ್ಥಿಗಳ ಆದರ್ಶ ವ್ಯಕ್ತಿಗಳಾಗಿದ್ದರು. ಆ ಸಮಯದಲ್ಲಿ ಗುರು-ಶಿಷ್ಯರ ಸಂಬಂಧ ಹಾಲು-ಜೇನಿನಂತೆ ಇತ್ತು. ಶಿಕ್ಷಕರ ದಿನವು ವಿದ್ಯಾರ್ಥಿಗಳು ಮತ್ತು ಶಿಕ್ಷಕರ ನಡುವಿನ ಬಾಂಧವ್ಯವನ್ನು ಬಲಪಡಿಸುವ ದಿನವಾಗಿದೆ. ವಿದ್ಯಾರ್ಥಿಗಳು ತಮ್ಮ ಶಿಕ್ಷಕರನ್ನು ಮೆಚ್ಚುವ ದಿನವಾಗಿದೆ ಮತ್ತು ಇದು ವಿದ್ಯಾರ್ಥಿಗಳ ಬಾಂಧವ್ಯವನ್ನು ಬೆಳೆಸಲು ಸಹಾಯ ಮಾಡುತ್ತದೆ. ವಿದ್ಯಾರ್ಥಿಗಳು ಶಿಕ್ಷಕರ ಮೌಲ್ಯ ಮತ್ತು ಕಠಿಣ ಪರಿಶ್ರಮಕ್ಕೆ ಧನ್ಯವಾದಗಳನ್ನು ಅರ್ಪಿಸುವ ದಿನವಾಗಿದೆ. ಆದರೆ ಇತ್ತೀಚೆಗೆ ಹಿಂದಿನಂತೆ ಗುರು-ಶಿಷ್ಯರ ಬಾಂಧವ್ಯ ಕಾಣಿಸಿಗುವುದು ಬೆರಳೆಣಿಕೆಯಷ್ಟು ಮಾತ್ರ ಎಂಬುದು ದುಃಖಕರ ವಿಷಯ.

ಏನೂ ತಿಳಿಯದ ಒಬ್ಬ ಸಾಮಾನ್ಯ ಮನುಷ್ಯನನ್ನು ಜೀವನದ ಮೌಲ್ಯಗಳು, ಜೀವನದ ಅರ್ಥ, ಗುರಿ, ಆ ಗುರಿಯನ್ನು ಸಾಧಿಸಲು ಇರುವ ಮಾರ್ಗ ಮುಂತಾದವುಗಳನ್ನು ಗುರುವಿನ ಮಾರ್ಗದರ್ಶನವಿಲ್ಲದೆ ತಿಳಿಯಲು ಸಾಧ್ಯವಿಲ್ಲ. ಪ್ರತಿಯೊಬ್ಬರೂ ಜೀವನದಲ್ಲಿ ಅನೇಕ ಗುರುಗಳೊಂದಿಗೆ ಮುಖಾಮುಖಿ ಆಗುತ್ತಾರೆ. ಮೊದಲ ಗುರು ತಾಯಿ, ತಂದೆ ನಂತರದ ಸ್ಥಾನವೇ ಶಾಲೆಯ ಗುರುಗಳು. ಶಾಲೆ, ಕಾಲೇಜು, ವಿಶ್ವ ವಿದ್ಯಾಲಯದ, ಒಟ್ಟಿನಲ್ಲಿ ನಾವು ಎಷ್ಟು ವರ್ಷಗಳವರೆಗೂ ಕಲಿಯುವೆವೋ ಅಷ್ಟೂ ಶಿಕ್ಷಣವನ್ನು ಮುಗಿಸುವವರೆಗಂತೂ ಅವರೆಲ್ಲರೂ ನಮಗೆ ದಾರಿದೀಪ.

ಡಾ ಎ.ಪಿ.ಜೆ. ಅಬ್ದುಲ್ ಕಲಾಂ, ಸರ್ವಪಲ್ಲಿ ರಾಧಾಕೃಷ್ಣನ್‌ರಂತಹ ಮಹಾನ್ ವಿದ್ವಾಂಸರು ಶಿಕ್ಷಕರ ಸ್ಥಾನಕ್ಕೆ ಉನ್ನತವಾದ ಗೌರವ ತಂದುಕೊಟ್ಟಿದ್ದಾ-ರೆ. ಅಂತಹುದೇ ಹಾದಿಯಲ್ಲಿ ಅನೇಕ ಶಿಕ್ಷಕರು, ಪ್ರಾಧ್ಯಾಪಕರು ಇನ್ನಿತರ ಮಹನೀಯರು ಸೇವೆ ಸಲ್ಲಿಸಿದ್ದಾರೆ. ಅವರು ವಿದ್ಯಾರ್ಥಿ ಜೀವನದಲ್ಲಿ ಅನೇಕ ರೀತಿಯಲ್ಲಿ ಮಹತ್ವದ ಸ್ಥಾನವನ್ನು ತಂದುಕೊಟ್ಟಿದ್ದಾರೆ. ಹಾಗಾಗಿ ಸದ್ವಿದ್ಯೆಯನ್ನು ಕಲಿಸಿದಾತನೆ ಗುರು. ಸನ್ನಡತೆಯ ತೋರುವಾತನೆ ಗುರು ಮತ್ತು ಅವರೇ ವಿದ್ಯಾರ್ಥಿಗಳ ಬಾಳ ಹೊಂಬೆಳಕು.



**– ಬಸವರಾಜ ಎಮ್.ಯರಗುಪ್ಪಿ.**
ಶಿಕ್ಷಕರು, ಹವ್ಯಾಸಿ ಬರಹಗಾರರು
ರಾಮಗೇರಿ, ಲಕ್ಷ್ಮೇಶ್ವರ.

## 29 ತಿಂಗಳ ನಂತರದ ಮೊದಲ ಹೆಜ್ಜೆ, 'ವಿಳಂಬದ ನಡೆ' ಎಂದ ಕಾಂಗ್ರೆಸ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

2023ರ ಮೇ ತಿಂಗಳಲ್ಲಿ ಜನಾಂಗೀಯ ಹಿಂಸಾಚಾರ ಆರಂಭವಾದ ನಂತರ ಮೊದಲ ಬಾರಿಗೆ ಮಣಿಪುರಕ್ಕೆ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡುವ ಪ್ರಸ್ತಾಪದ ವಿರುದ್ಧ ಕಾಂಗ್ರೆಸ್ ಕಿಡಿಕಾರಿದೆ. ಈ ಭೇಟಿಯನ್ನು "ಅರ್ಧ ಮನಸ್ಸಿನ, ವಿಳಂಬದ ನಡೆ" ಎಂದು ಕರೆಯುವ ಮೂಲಕ, ಕಳೆದ ವರ್ಷದಿಂದ ಸಂಕಷ್ಟದಲ್ಲಿರುವ ರಾಜ್ಯದ ಬಗ್ಗೆ ಪ್ರಧಾನಿಯವರ ಮೌನವನ್ನು ಕಾಂಗ್ರೆಸ್ ಪ್ರಶ್ನಿಸಿದೆ.

"ಪ್ರಧಾನಮಂತ್ರಿಯವರು ಅಂತಿಮವಾಗಿ ಧೈರ್ಯ ಮತ್ತು ಸಹಾನುಭೂತಿಯನ್ನು ಒಟ್ಟುಗೂಡಿಸಿಕೊಂಡು ಸೆಪ್ಟೆಂಬರ್ 13ರಂದು ಮಣಿಪುರಕ್ಕೆ ಭೇಟಿ ನೀಡಬಹುದು. ಆದರೆ ಇದು 'ಅದು ಸಾಕಾಗದು, ಬಹಳ ತಡವಾಗಿದೆ' (Too Little, Too Late – TLTL) ಎಂಬ ಪರಿಸ್ಥಿತಿಯಾಗಿದೆ" ಎಂದು ಕಾಂಗ್ರೆಸ್‌ನ ಸಂವಹನ ವಿಭಾಗದ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದರು.



ಗದುಗಿನ ಶ್ರೀ ಪಂ.ಪಂಚಾಕ್ಷರಿ ಗವಾಯಿಗಳವರ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದ (ಎ.ಪಿ.ಎಂ.ಸಿ ಯಾರ್ಡ್) ದಲಾಲ ವರ್ತಕರ ಹಾಗೂ ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವದ ಅಂಗವಾಗಿ 7ನೇ ದಿನವಾದ ಮಂಗಳವಾರ ಬೆಳಿಗ್ಗೆ ಆಯೋಜಿಸಿದ್ದ ರಕ್ತದಾನ ಶಿಬಿರದಲ್ಲಿ 25ಕ್ಕೂ ಹೆಚ್ಚು ಜನರು ರಕ್ತದಾನ ಮಾಡಿದರು. ಗದಗ ಬಸವೇಶ್ವರ ಬ್ಲಡ್ ಬ್ಯಾಂಕ್ ಸಿಬ್ಬಂದಿಗಳಿಂದ ರಕ್ತ ಸಂಗ್ರಹಿಸಲಾಯಿತು. ಈ ಸಂದರ್ಭದಲ್ಲಿ ಎ.ಪಿ.ಎಂ.ಸಿ ದಲಾಲ ವರ್ತಕರ ಸಂಘ ಹಾಗೂ ಖರೀದಾರರ ಸಂಘದ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

### ನೀರು ಸರಬರಾಜಿನ ಸೂಕ್ತ ನಿರ್ವಹಣೆಯಿಲ್ಲದೆ ಹೆಚ್ಚಿದ ಅಭಾವ । ರೋಗ ಹರಡುವ ಭಿತಿಯಲ್ಲಿ ಜನತೆ

# ನೀರುಗಂಟಿಗಳ ದರ್ಪಕ್ಕೆ ಸಾರ್ವಜನಿಕರು ಸುಸ್ತು

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಹರಪನಹಳ್ಳಿ ತಾಲೂಕಿನ ಬಾಗಳಿ ಗ್ರಾಮದಲ್ಲಿ 2 ಸಾವಿರಕ್ಕೂ ಅಧಿಕ ಮನೆಗಳಿದ್ದು, 3 ವಾರ್ಡ್‌ಗಳನ್ನು ಹೊಂದಿದೆ. ಎಲ್ಲಾ ಕುಟುಂಬಗಳ ದಿನನಿತ್ಯದ ಬಳಕೆಗೆ ಅಗತ್ಯವಿದ್ದಷ್ಟು ನೀರಿದ್ದರೂ ಸಮರ್ಪಕವಾದ ನಿರ್ವಹಣೆಯಿಲ್ಲದೆ ಗ್ರಾಮದಲ್ಲಿ ನೀರಿನ ಅಭಾವ ಹೆಚ್ಚಿದೆ.

ನಿರಂತರವಾಗಿ ಸುರಿದ ಮಳೆಯಿಂದ ಗ್ರಾಮಕ್ಕೆ ಸರಬರಾಜು ಆಗುವ ಕುಡಿಯುವ ನೀರಿನ ಪೈಪ್‌ಗಳ ಮೇಲೆ ದ್ವಿಚಕ್ರ ವಾಹನಗಳು ಮತ್ತು ಟ್ರ್ಯಾಕ್ಟರ್‌ಗಳಂತಹ ವಾಹನಗಳು ಸಂಚರಿಸಿದ್ದರಿಂದ ಕೆಲವು ಕಡೆ ಪೈಪ್ ಲೈನ್ ಒಡೆದಿದ್ದರೆ, ಕೆಲವು ಕಡೆ ಹಲವಾರು ವರ್ಷಗಳಿಂದ ಹಳೆಯ ತುಕ್ಕು ಹಿಡಿದ ಪೈಪ್‌ಗಳನ್ನು ಹಾಕಿರುವುದರಿಂದ ತುಂಡಾಗಿ ನೀರು ಪೋಲಾಗುತ್ತಿದೆ. ಸಂಬಂಧಿಸಿದ



ವಾರ್ಡಿನ ಸಾರ್ವಜನಿಕರು ಗ್ರಾಮ ಪಂಚಾಯಿತಿಗೆ ಕಳೆದ ನಾಲ್ಕೈದು ತಿಂಗಳುಗಳಿಂದ ಹಲವಾರು ಬಾರಿ ಮನವಿ ನೀಡಿದ್ದರೂ ಅವ್ಯವಸ್ಥೆ ಮಾತ್ರ ಹಾಗೆಯೇ ಇದೆ.

ಕಳೆದ ತಿಂಗಳು ನಡೆದ ಗ್ರಾಮ ಸಭೆಯಲ್ಲಿ ಇದರ ಬಗ್ಗೆ ಪಿಡಿಓ, ಅಧ್ಯಕ್ಷರು ಮತ್ತು ಸದಸ್ಯರು ಚರ್ಚಿಸಿ ಗ್ರಾಮದಲ್ಲಿ ಪ್ರತಿ 3 ವಾರ್ಡ್‌ಗೆ ಒಬ್ಬರಂತೆ 3 ಜನ ನೀರುಗಂಟಿಗಳನ್ನು ನೇಮಕ ಮಾಡಲಾಗಿದೆ. ಇವರಿಗೆ ಒಡೆದಿರುವ ಪೈಪ್‌ಲೈನ್ ದುರಸ್ತಿ ಮಾಡುವಂತೆ ನಿರ್ದೇಶನ ನೀಡಿದ್ದರೂ, ಯಾರ ಮಾತಿಗೂ ಕವಡೆ ಕಾಸಿನ ಕಿಮ್ಮತ್ತು ನೀಡದೆ ಕಾಲಹರಣ ಮಾಡುತ್ತಿದ್ದಾರೆಯೇ ಹೊರತು ಯಾವ ಕೆಲಸವೂ ಆಗುತ್ತಿಲ್ಲ. ಪ್ರಶ್ನಿಸಹೋದರೆ



ತಾಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವೈ.ಎಚ್. ಚಂದ್ರಶೇಖರ್ ಈ ಬಗ್ಗೆ ಪ್ರತಿಕ್ರಿಯಿಸಿ, ಗ್ರಾಮದಲ್ಲಿ ಆಗಿರುವ ಸಮಸ್ಯೆಯನ್ನು ಆದಷ್ಟು ಬೇಗ ಸರಿಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸುವೆ ಎಂದಿದ್ದಾರೆ.

ಸಾರ್ವಜನಿಕರ ಮೇಲೆಯೇ ದರ್ಪ ತೋರಿಸುತ್ತಿದ್ದಾರೆಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಗ್ರಾಮದ ಮಂಡಿ ದುರುಗಮ್ಮ ದೇವಸ್ಥಾನದ ಹಿಂಭಾಗದ ವಾಲ್ ಮತ್ತು ಶೃಂಗಾರತೋಟಕ್ಕೆ ಹೋಗುವ ಮುಖ್ಯ ರಸ್ತೆ, ಕೆರೆಯ ಕೋಡಿಯ ಮೇಲುಗಡೆ, ಪಶು ಆಸ್ಪತ್ರೆಯ ಮುಂಭಾಗ, ಚೌಡಮ್ಮ ದೇವಸ್ಥಾನದ ಸಮೀಪ ಹಾಗೂ ಕಲ್ಲೇಶ್ವರ ದೇವಸ್ಥಾನಕ್ಕೆ ಸಾಗುವ ದಾರಿಯಲ್ಲಿ ನೀರಿನ ಪೈಪ್‌ಗಳು ಒಡೆದು ಅದರಲ್ಲಿ ಶುದ್ಧ ನೀರಿನೊಂದಿಗೆ ಮಳೆಯ ನೀರು ಮತ್ತು ರಸ್ತೆಯ ಮೇಲಿನ ಕಲುಷಿತ ನೀರು ಮಿಶ್ರಣವಾಗಿ ಗ್ರಾಮಸ್ಥರು ಚರ್ಮ ರೋಗ, ವಾಂತಿ-ಭೇದಿ ಹಾಗೂ ಜ್ವರದಿಂದ ಬಳಲುವಂತಾಗಿದೆ.

ನಿತ್ಯ ಕಲುಷಿತ ನೀರು ಸೇವನೆಯಿಂದ ಹಿರಿಯರಿಗೆ, ಮಕ್ಕಳಿಗೆ ಮತ್ತು ಬಾಣಂತಿಯರಿಗೆ ತೊಂದ-ರೆಯಾಗುತ್ತಿದ್ದು, ನೀರುಗಂಟಿಗಳು ನಿರ್ಲಕ್ಷ್ಯತನ ಬಿಟ್ಟು ಕೆಲಸ ಮಾಡಬೇಕು. ಇಲ್ಲವಾದರೆ ಅವರನ್ನು ಕೆಲಸದಿಂದ ತೆಗೆದುಹಾಕಿ ಬೇರೆಯವರನ್ನು ಕೂಡಲೇ ನೇಮಕ ಮಾಡಿಕೊಳ್ಳುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.




ಗದಗ ನಗರದ ವೀರಶೈವ ಲೈಬ್ರರಿ ಬಳಿಯ ಶ್ರೀ ಸುದರ್ಶನ ಚಕ್ರ ಯುವ ಮಂಡಳಿ ವತಿಯಿಂದ ಮಂಗಳವಾರ ಬೆಳಿಗ್ಗೆ ನಾಡಿನ ಶ್ರೇಯೋಭಿವೃದ್ಧಿಗಾಗಿ ಗಣಹೋಮ ನೆರವೇರಿಸಲಾಯಿತು. ನರಸಿಂಹ ಕಾಮರ್ತಿ, ಪಕೀರಸಾ ಭಾಂಡಗೆ, ಸಾಗರ ಪವಾರ, ನಾರಾಯಣಸಾ ಹಬೀಬ ಹಾಗೂ ಪ್ರವೀಣ ಹೆರಕಲ್ಲ ದಂಪತಿಗಳು ಗಣಹೋಮ ಪೂಜೆಯಲ್ಲಿ ಪಾಲ್ಗೊಂಡಿದ್ದರು. ಅಧ್ಯಕ್ಷ ರವಿರಾಜ ಮಾಳೇಕೊಪ್ಪಮಠ, ಸುಧೀರ ಕಾಟೀಗರ, ರಾಘವೇಂದ್ರ ಹಬೀಬ, ಶಿವರಾಜ ಕೋಟಿ, ರವಿ ದಂಡಿನ, ಹುಲಿಗೆಮ್ಮ ಹಬೀಬ, ಸುಮಿತ್ರಾ ಚವ್ಹಾಣ, ವಂದನಾ ವೇರ್ಣೇಕರ, ಅಶ್ವಿನಿ ಜಗತಾಪ, ರತ್ನಾ ಕುರಗೋಡ, ಸೇರಿದಂತೆ ಸಮಿತಿಯ ಪದಾಧಿಕಾರಿಗಳು, ಕಾರ್ಯಕರ್ತರು ಪಾಲ್ಗೊಂಡಿದ್ದರು.

## 'ಸೌಜನ್ಯ ತಾಯಿ ಹೇಳಿದ ನೈಜ ಸಂಗತಿ ಜಗತ್ತಿಗೆ ತಿಳಿಸುವ ಧೈರ್ಯವಿದೆಯೇ..?'; ಬಿಜೆಪಿ ನಾಯಕರಿಗೆ ಪ್ರಿಯಾಂಕ್ ಸವಾಲು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

'ಸೌಜನ್ಯ ತಾಯಿ ಹೇಳಿದ ನೈಜ ಸಂಗತಿ ಜಗತ್ತಿಗೆ ತಿಳಿಸುವ ಧೈರ್ಯವಿದೆಯೇ ಎಂದು 'ಧರ್ಮಸ್ಥಳ ಚಲೋ' ಮಾಡಿದ ರಾಜ್ಯ ಬಿಜೆಪಿ ನಾಯಕರಿಗೆ ಸಚಿವ ಪ್ರಿಯಾಂಕ್ ಖರ್ಗೆ ಸವಾಲು ಹಾಕಿದ್ದಾರೆ.

ಧರ್ಮಸ್ಥಳದಲ್ಲಿ ಸಾಮೂಹಿಕ ಅತ್ಯಾಚಾರಕ್ಕೊಳಗಾಗಿ ಸಾವನ್ನಪ್ಪಿದ ಕುಮಾರಿ ಸೌಜನ್ಯ ಮನೆಗೆ ಭೇಟಿ ನೀಡಿದ್ದ ಬಿಜೆಪಿ ನಾಯಕರಿಗೆ ಸವಾಲು ಹಾಕಿರುವ ಸಚಿವರು, "ಧರ್ಮಸ್ಥಳದ ಬಗ್ಗೆ ಅಪಪ್ರಚಾರ ನಡೆಯುತ್ತಿದೆ, ಷಡ್ಯಂತ್ರ ನಡೆಯುತ್ತಿದೆ ಎಂದು ಧರ್ಮಸ್ಥಳ ಚಲೋ ಮಾಡಿದ ಬಿಜೆಪಿ ನಾಯಕರು ಸೌಜನ್ಯ ತಾಯಿ ಕುಸುಮಾವತಿಯವರು ತಮ್ಮೆದುರು ಹೇಳಿದ ನೈಜ ಸಂಗತಿಯನ್ನು ಜಗತ್ತಿಗೆ ತಿಳಿಸು ಧೈರ್ಯವಿದೆಯೇ" ಎಂದು ಎಕ್ಸ್‌ನಲ್ಲಿ ಪ್ರಶ್ನಿಸಿದ್ದಾರೆ.

"ಸೌಜನ್ಯ ಹೆಸರು ಹೇಳಿಕೊಂಡು ಹಣ ಮಾಡಿದ್ದಾರೆ, ಇಷ್ಟು ದೊಡ್ಡ ಮನೆ ಕಟ್ಟಿಸಿದ್ದಾರೆ ಎಂದು ನಿಮ್ಮದೇ ಪಕ್ಷದವರು ಹೇಳುತ್ತಿದ್ದಾರೆ ಎಂಬ ಕುಸುಮಾವತಿಯವರ ಮಾತಿಗೆ ರಾಜ್ಯ ಬಿಜೆಪಿ ನಾಯಕರು ಉತ್ತರ ನೀಡದೆ ಮೌನವಹಿಸಿದ್ದೇಕೆ? ಬಿವೈ ವಿಜಯೇಂದ್ರ ಅವರೇ, ಮೊದಲು ಸೌಜನ್ಯ ಕುಟುಂಬಕ್ಕೆ ನಿಮ್ಮ ಪಕ್ಷ ನೀಡಿದ ಕಿರುಕುಳಕ್ಕೆ ನ್ಯಾಯ ಸಿಗಬೇಕಲ್ಲವೇ? ಆ ನೊಂದ ಕುಟುಂಬಕ್ಕೆ ಬಿಜೆಪಿ ನೀಡುತ್ತಿರುವ ಕಿರುಕುಳದ ಬಗ್ಗೆ ಉತ್ತರ ಸಿಗಲೇಬೇಕು" ಎಂದು ಆಗ್ರಹಿಸಿದ್ದಾರೆ.

"ಬಿಜೆಪಿ ಯಾರ ಪರವಾಗಿ ಧರ್ಮಸ್ಥಳಕ್ಕೆ ಹೋಗಿದ್ದರೋ ಅವರ ವಿರುದ್ಧವೇ ಕುಸುಮಾವತಿ ದೂರು ಹೇಳಿದ್ದಾರೆ. ಬಿಜೆಪಿ ನಾಯಕರು ಕುಸುಮಾವತಿಯವರ ಮಾತು ಕೇಳಿಸಿಕೊಂಡ ನಂತರವೂ ಕಾರ್ಯಕ್ರಮದ ವೇದಿಕೆ ಹತ್ತಿ ಕೂರುವುದಕ್ಕೆ ಹೇಗೆ ಮನಸಾಯಿತು? ಬಿಜೆಪಿಯವರು ಸೌಜನ್ಯ ಪರವೋ, ವಿರುದ್ಧವೋ ಎನ್ನುವುದನ್ನು ಸ್ಪಷ್ಟಪಡಿಸುವ ಅಗತ್ಯವಿದೆ" ಎಂದು ಅವರು ಬಿಜೆಪಿ ನಾಯಕರನ್ನು ಪ್ರಶ್ನಿಸಿದ್ದಾರೆ.

### ಶಿರಹಟ್ಟಿಯ ಡಬಾಲಿ ಪ್ರೌಢಶಾಲೆಯ ಶಾಲಾ ಸಂಸತ್ ಉದ್ಘಾಟನೆ, ಪ್ರತಿಭಾ ಪುರಸ್ಕಾರ

# ಶಾಲೆಗಳು ಸದಾಚಾರ ಬಿತ್ತುವ ಕೇಂದ್ರಗಳು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಾಲೆಗಳು ಕಲಿಕೆಯ ಜ್ಞಾನ ದೇಗುಲಗಳು. ಕಲಿಕೆಯೊಂದಿಗೆ ಉತ್ತಮ ಮೌಲ್ಯ ಹಾಗೂ ಸದಾಚಾರವನ್ನು ಬಿತ್ತುವ ಶ್ರದ್ಧೆಯ ಕೇಂದ್ರಗಳಾಗಿವೆ. ವಿದ್ಯಾರ್ಥಿಗಳು ಬಾಲ್ಯದಲ್ಲಿಯೇ ಸಂಸ್ಕಾರಯುತ ಆದರ್ಶಗಳನ್ನು ರೂಢಿಸಿಕೊಂಡು ಉತ್ತಮ ವಿದ್ಯಾರ್ಥಿಗಳಾಗಬೇಕು ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಶಿರಹಟ್ಟಿಯ ಎಫ್.ಎಂ. ಡಬಾಲಿ ಪ.ಪೂ ಮಹಾವಿದ್ಯಾಲಯ, ಪ್ರೌಢಶಾಲೆಯಲ್ಲಿ ಗಜಾನನೋತ್ಸವ ಅಂಗವಾಗಿ ನಡೆದ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ, ಶೈಕ್ಷಣಿಕ ಸಾಲಿನ ಶಾಲಾ ಸಂಸತ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಉಪನ್ಯಾಸ ನೀಡಿದರು.

ಶಾಲಾ ಸಂಸತ್



ಉದ್ಘಾಟಿಸಿದ ಸಂಸ್ಥೆಯ ಗೌರವ ಕಾರ್ಯದರ್ಶಿ ಎನ್.ಆರ್. ಕುಲಕರ್ಣಿ ಮಾತನಾಡಿ, ಶಾಲಾ ಸಂಸತ್ ರಚನೆಯು ಮಕ್ಕಳಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸುತ್ತದೆ. ದೇಶ, ಆಡಳಿತ ಪದ್ಧತಿಗಳು, ಪ್ರಜಾಪ್ರಭುತ್ವ, ವಿವಿಧ ಖಾತೆಗಳು, ಅವುಗಳ ನಿರ್ವಹಣೆ, ಸುಸ್ಥಿರ ಆಡಳಿತ, ಜವಾಬ್ದಾರಿ ಹಂಚಿಕೆಗಳ ಬಗೆಗೆ ಮಕ್ಕಳು ತಿಳಿದು ಉತ್ತಮ ನಾಗರಿಕರಾಗಿ ಸರ್ವತೋಮುಖವಾಗಿ ಅಭಿವೃದ್ಧಿ ಹೊಂದಿ ಆಂತರಿಕ ಸೌಂದರ್ಯಕ್ಕೆ ಒತ್ತು ನೀಡಿ, ಮಾನಸಿಕ ಏಕಾಗ್ರತೆಯನ್ನು ರೂಡಿಸಿಕೊಳ್ಳಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಆಡಳಿತಾಧಿಕಾರಿ ಐ.ಬಿ. ಬೆನಕೊಪ್ಪ ಮಾತನಾಡಿ, ಬಾಲ್ಯಾವಸ್ಥೆಯು ಮಕ್ಕಳ ಕಲಿಕೆಯಲ್ಲಿ ಪ್ರಮುಖ ಘಟ್ಟವಾಗಿದ್ದು, ನಿರಂತರ ಓದು-ಮನನ, ಶಿಕ್ಷಕರ ಹಾಗೂ ಕುಟುಂಬದೊಂದಿಗೆ ಆತ್ಮೀಯತೆಯ ಸಂಬಂಧ ಹೊಂದಿ ವಿದ್ಯಾರ್ಥಿಗಳು ಕಾರ್ಯ ನಿರ್ವಹಿಸಬೇಕು. ಹಿರಿಯರು ನಮ್ಮೆಲ್ಲರ ಆಸ್ತಿ. ಅವರ ಅನುಭವದ ನುಡಿಗಳು ನಮಗೆಲ್ಲ ದಾರಿದೀಪ ಎಂದರು.

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಮನೋಹರ ಬೆಳವಟಗಿ, ಚೇತನ ಲಮಾಣಿ, ದಾದಾಪೀರ ಲಮಾಣಿ, ಕಾಶಮ್ಮ ಪೂಜಾರ, ಪಾರ್ವತಿ ಧಳೆವಿ, ಶಂಶಾದಬೀ ಕುರ್ತಕೋಟಿ ಇವರಿಗೆ ಸಂಸ್ಥೆಯ ವತಿಯಿಂದ ಪ್ರತಿಭಾ ಪುರಸ್ಕಾರ ಹಾಗೂ ಪ್ರಶಸ್ತಿಯೊಂದಿಗೆ ಸನ್ಮಾನಿಸಿ ಗೌರವಿಸಲಾಯಿತು.

ಶಿರಹಟ್ಟಿಯ ಸರ್ಕಾರಿ ಹೆಣ್ಣು ಮಕ್ಕಳ ವಸತಿ ನಿಲಯದ ಮೇಲ್ವಿಚಾರಕಿ ಎಚ್.ಎನ್. ನಿಟ್ಟಾಲಿ, ಸರ್ಕಾರಿ ಗಂಡು ಮಕ್ಕಳ ವಸತಿ ನಿಲಯದ ವಾರ್ಡನ್ ಎಂ.ಐ. ಕರ್ಣಿ ಹಾಗೂ ಅತಿಥಿ ಗಣ್ಯರನ್ನು ಸ್ಮಾನಿಸಿ ಗೌರವಿಸಲಾಯಿತು.

ಶಿಕ್ಷಣ ಸಮಿತಿಯ ಚೇರ್‌ಮನ್ ಡಿ.ಎನ್. ಡಬಾಲಿ ಮಾತನಾಡಿ, ಮಕ್ಕಳಿಗಾಗಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಿ ಮಕ್ಕಳ ಪ್ರತಿಭೆಗೆ ಸ್ಫೂರ್ತಿ ನೀಡಲಾಗುತ್ತಿದೆ. ಸ್ಪರ್ಧಾತ್ಮಕ ಮನೋಭಾವನೆಯನ್ನು ವಿದ್ಯಾರ್ಥಿಗಳು ರೂಢಿಸಿಕೊಂಡು ಉತ್ತಮ ಓದಿನೊಂದಿಗೆ ಯಶಸ್ಸು ಪಡೆಯಬೇಕು ಎಂದರು.

ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ವೇದಿಕೆಯ ಮೇಲೆ ಆಡಳಿತ ಮಂಡಳಿಯ ಸದಸ್ಯರಾದ ಗಿರೀಶ ಎಂ.ಡಬಾಲಿ, ವಿ.ವಿ. ಅಮರಶೆಟ್ಟರ, ಎಸ್.ವೈ. ಪಾಟೀಲ, ಸುರೇಶ ಡಬಾಲಿ, ಪ.ಪಂ ಸದಸ್ಯ ಹೊನ್ನಪ್ಪ ಶಿರಹಟ್ಟಿ, ಪ್ರಾ. ಎಂ.ಸಿ. ಭಜಂತ್ರಿ, ನಿವೃತ್ತ ಶಿಕ್ಷಕ ಎಂ.ಕೆ. ಲಮಾಣಿ, ಸುಮಾ ಗಿರೀಶ್ ಡಬಾಲಿ, ವಿದ್ಯಾರ್ಥಿ ಪ್ರತಿನಿಧಿಗಳಾದ ವಿಜಯಲಕ್ಷ್ಮೀ ಡೊಳ್ಳಿನ, ಕುಮಾರಸ್ವಾಮಿ ಕುಳಗೇರಿ, ಶಿಕ್ಷಣ ಸಂಸ್ಥೆಯ ಪದಾಧಿಕಾರಿಗಳು, ಸರ್ವ ಸದಸ್ಯರು, ಮುಖ್ಯೋಪಾಧ್ಯಾಯರುಗಳಾದ ಎನ್.ಎಚ್. ಶಿಗ್ಲಿ, ಆರ್.ಎಫ್. ಬಟಗುರ್ಕಿ ಉಪಸ್ಥಿತರಿದ್ದರು.

ರಜಿಯಾ ಒಂಟಿ ಸಂಗಡಿಗರು ಪ್ರಾರ್ಥಿಸಿದರು. ಎಫ್.ಎಂ. ಹಳ್ಳೆಮ್ಮನವರ ಸ್ವಾಗತಿಸಿದರು. ಎನ್.ಆರ್. ಉಡಚಗೊಂಡ ಪರಿಚಯಿಸಿದರು. ರೇಣುಕಾ ಜಗಂಡಬಾವಿ ನಿರೂಪಿಸಿದರು. ಎಸ್.ಜಿ. ಲಮಾಣಿ ವಂದಿಸಿದರು. ಬಾಲಕ-ಬಾಲಕಿಯರ ಪ್ರೌಢಶಾಲೆಯ ಜಿ.ಕೆ. ಕರ್ಕಣ್ಣವರ, ಎಲ್.ಪಿ. ನಾಯಕ, ರೂಪಾ ಕುಲಕರ್ಣಿ, ಕೆ.ವಿ. ಗೌಡರ, ಡಿ.ಐ. ಕಮಗಲ್, ಎಫ್.ಎ. ಬಾಬುಖಾನ್, ಟಿ.ಎಸ್. ಲಮಾಣಿ, ಪಾಲಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸುವರ್ಣರಿಗೆ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನ ಜನಸಿರಿ ಫೌಂಡೇಶನ್ ಕೊಡಮಾಡುವ 2025ನೇ ಸಾಲಿನ 'ಅತ್ಯುತ್ತಮ ಶಿಕ್ಷಕಿ' ಪುರಸ್ಕಾರವನ್ನು ಹಾವೇರಿ ಜಿಲ್ಲೆಯ ಶಿಗ್ಗಾವ್ ತಾಲೂಕಿನ ಬಂಕಾಪುರದ ಸುವರ್ಣ ಮಾಳಗಿಮನಿ ಅವರಿಗೆ ಸಂದಿದೆ.

ಬೆಂಗಳೂರಿನ ಕುವೆಂಪು ರಸ್ತೆಯಲ್ಲಿ ಮೈಸೂರು ಬ್ಯಾಂಕ್ ಹತ್ತಿರ ಇರುವ ಶಿಕ್ಷಕರ ಸದನದಲ್ಲಿ ಜನಸಿರಿ ಫೌಂಡೇಶನ್ ವಾರ್ಷಿಕ ಸಾಹಿತ್ಯ ಮತ್ತು ಸಂಸ್ಕೃತಿಕ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ಸಂದರ್ಭದಲ್ಲಿ ಹಾವೇರಿ ಜಿಲ್ಲೆ ಹೊಸಮಠದ ಪರಮಪೂಜ್ಯ ಬಸವಲಿಂಗ ಮಹಾಸ್ವಾಮಿಗಳು, ಜನಸಿರಿ ಫೌಂಡೇಶನ್ ಮುಖ್ಯಸ್ಥರಾದ ನಾಗಲೇಕರ, ಚಲನಚಿತ್ರ ನಟರಾದ ಮುಖ್ಯಮಂತ್ರಿ ಚಂದ್ರು, ಗುರುರಾಜ್ ಹೊಸಕೋಟಿ, ಡಿಂಗ್ರಿ ನಾಗರಾಜ್, ಮಿಮಿಕ್ರಿ ಸದಾನಂದ, ಜನಸಿರಿ ಫೌಂಡೇಶನ್ ಮುಖ್ಯಸ್ಥರಾದ ನಾಗಲೇಖ ಮುಂತಾದವರಿದ್ದರು.

# ಇಂದು ಟೆಂಡರ್ ಇಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎ.ಪಿ.ಎಂ.ಸಿ ಪ್ರಾಂಗಣದಲ್ಲಿ ಪ್ರತಿಷ್ಠಾಪಿಸಿರುವ ಗಣೇಶನ ಮೂರ್ತಿ ವಿಸರ್ಜನೆ ಕಾರ್ಯಕ್ರಮವು ಸೆ.4ರಂದು ನಡೆಯಲಿದ್ದು, ಈ ದಿನ ಯಾವುದೇ ಟೆಂಡರ್ ಇರುವುದಿಲ್ಲ.

ರೈತ ಬಾಂಧವರು ಸಹಕರಿಸಬೇಕೆಂದು ದಲಾಲ ವರ್ತಕರ ಹಾಗೂ ಖರೀದಿದಾರರ ಸಂಘದ ಪ್ರಕಟಣೆ ತಿಳಿಸಿದೆ.

## ಇಡೀ ದಿನ ಕ್ಷೇತ್ರ ಸುತ್ತಿ ಸಾರ್ವಜನಿಕರ ಸಮಸ್ಯೆ ಆಲಿಸಿದ ಸಚಿವ ಸಂತೋಷ ಲಾಡ್

# ಬೆಳೆ ಹಾನಿ ಜಂಟಿ ಸಮೀಕ್ಷೆಗೆ ಸೂಚನೆ


■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ಕಲಘಟಗಿ ಮತಕ್ಷೇತ್ರ ವ್ಯಾಪ್ತಿಯ ವಿವಿಧ ಹಳ್ಳಿಗಳಿಗೆ, ಬೆಳೆಹಾನಿಯಾದ ರೈತರ ಜಮೀನುಗಳಿಗೆ ಭೇಟಿ ನೀಡಿ, ಕಲಘಟಗಿ ಪಟ್ಟಣದಲ್ಲಿ ಜನಸ್ಪಂದನ ಸಭೆ ಜರುಗಿಸಿ, ಸಾರ್ವಜನಿಕರ ಸಮಸ್ಯೆ, ಕುಂದು-ಕೊರತೆಗಳ ಅಹವಾಲುಗಳನ್ನು ಸ್ವೀಕರಿಸಿದರು.

ಹುಲಕೊಪ್ಪ ಹಾಗೂ ಗಳಗಿ ಗ್ರಾಮಗಳ ಚನ್ನಬಸಪ್ಪ ಹಳ್ಯಾಳ ಅವರ ಜಮೀನಿಗೆ ಭೇಟಿ ನೀಡಿ, ಕಾಡುಹಂದಿ, ಕರಡಿ ಹಾಗೂ ಇತರ ಕಾಡು ಪ್ರಾಣಿಗಳಿಂದ ಗೋವಿನಜೋಳದ ಬೆಳೆ, ನಾಗರಾಜ ಹಳ್ಯಾಳ ಅವರ ತೋಟದ ಭತ್ತದ ಬೆಳೆ ಹಾಗೂ ಕಬ್ಬು ಬೆಳೆ ವೀಕ್ಷಣೆ ಮಾಡಿ, ಮಾಹಿತಿ ಪಡೆದುಕೊಂಡರು.

ನಂತರ ಅವರು ಸ್ಥಳದಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿ, ಕಲಘಟಗಿ ಹಾಗೂ ಧಾರವಾಡ ತಾಲೂಕಿನ ಕೆಲವು ಪ್ರದೇಶಗಳು ಮಲೆನಾಡಿನ ಸೆರಗಿನಲ್ಲಿ ಇದ್ದು, ಗುಡ್ಡ, ಕಾಡು ಹೆಚ್ಚಾಗಿವೆ. ಮತ್ತು ಕಾಡುಪ್ರಾಣಿಗಳು ಸಾಕಷ್ಟು ಇವೆ. ರೈತರು ಪ್ರತಿವರ್ಷ ಬೆಳೆದ ಬೆಳೆಯನ್ನು ಸುಸೂತ್ರವಾಗಿ ರಾಶಿ ಮಾಡಿಕೊಂಡು ಬರಲು ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಈ ಸಮಸ್ಯೆಗಳಿಗೆ ಶಾಶ್ವತ ಪರಿಹಾರಕ್ಕಾಗಿ ಕ್ರಮವಹಿಸಬೇಕಿದೆ ಎಂದರು.

ರೈತರ ವಿವಿಧ ಬೇಡಿಕೆಗಳನ್ನು ಅರಣ್ಯ ಇಲಾಖೆಯ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ಸೂಕ್ತ ಪರಿಹಾರ ನೀಡಬೇಕು. ಕಾಡಿನ ಅಂಚಿನಲ್ಲಿರುವ ರೈತರ ಜಮೀನುಗಳ ಪಕ್ಕದ ರಸ್ತೆಗಳಲ್ಲಿ ಅರಣ್ಯ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ನಿರಂತರವಾಗಿ ಪೆಟ್ರೋಲಿಂಗ್ ಮಾಡಬೇಕು. ರೈತರೊಂದಿಗೆ ಚರ್ಚಿಸಿ, ಅವರೊಡನೆ ಇದ್ದು, ಅರಣ್ಯ ಇಲಾಖೆ ಉತ್ತಮವಾಗಿ ಕೆಲಸ ಮಾಡಬೇಕೆಂದು ಸಚಿವ ಸಂತೋಷ ಲಾಡ್ ಸೂಚಿಸಿದರು.



ಸಚಿವರು ಹುಲ್ಲಂಬಿ ಗ್ರಾಮ ವ್ಯಾಪ್ತಿಯ ಕಬ್ಬಿನ ತೋಟಗಳಿಗೆ ಭೇಟಿ ನೀಡಿ, ಬೆಳೆಹಾನಿ ಪರಿಶೀಲಿಸಿ, ಮನವಿ ಸ್ವೀಕರಿಸಿದರು. ಬೆಳೆಹಾನಿಗೆ ಸೂಕ್ತ ಪರಿಹಾರದ ಭರವಸೆ ನೀಡಿದರು. ಹುಲ್ಲಂಬಿ ರೈತರಾದ ತವನಪ್ಪ ರಾಯಪ್ಪ ಅಳಗವಾಡಿ ಅವರ 16 ಎಕರೆ 16 ಗುಂಟೆ ಜಮೀನು ಹಾಗೂ ಶಂಕ್ರವ್ವ ಕೋ.ರುದ್ರಪ್ಪ ಬಿಸರಳ್ಳಿ ಅವರ 5 ಎಕರೆ 26 ಗುಂಟೆ ಜಮೀನುದಲ್ಲಿ ಬೆಳೆದ ಮೆಕ್ಕೆಜೋಳ ಮತ್ತು ಕಬ್ಬು ಬೆಳೆ ಹಾನಿಯಾದ ಬಗ್ಗೆ ಸಚಿವರು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ರೈತರು ಮಾತನಾಡಿ, ಗುಡ್ಡ ಹಾಗೂ ಕಾಡಿನ ಪಕ್ಕದಲ್ಲಿರುವ ರೈತರಿಗೆ ಕಾಡುಪ್ರಾಣಿಗಳಿಂದ ಜೀವ ಭಯವಿದೆ. ಬಿತ್ತಿದ ಬೆಳೆಗಳು ಸರಿಯಾಗಿ ಬರುತ್ತಿಲ್ಲ. ಕೊಯ್ಲಿಗೆ ಬಂದಿರುವ ಬೆಳೆಗಳನ್ನು ಆನೆ, ಮಂಗಗಳು, ಕಾಡುಹಂದಿ, ಕರಡಿ, ಚಿಗರೆಯಂತಹ ಕಾಡು ಪ್ರಾಣಿಗಳು ಹಾಳು ಮಾಡುತ್ತಿವೆ. ಸರ್ಕಾರವು ಅರಣ್ಯ ಇಲಾಖೆಯ ಮೂಲಕ ನೀಡುವ ಬೆಳೆ ಪರಿಹಾರವನ್ನು ಹೆಚ್ಚಿಸಬೇಕು. ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಪ್ರೊಬೆಷನರಿ ರಿತೀಕಾ ವರ್ಮಾ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಕಲಘಟಗಿ ತಹಸೀಲ್ದಾರ ಬಸವರಾಜ ಮುಂತಾದವರಿದ್ದರು.

# ಕಾಯಕ ನಿಷ್ಠರನ್ನು ಗೌರವಿಸುವ ಕಾರ್ಯವಾಗಲಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಾಮಾಣಿಕವಾಗಿ ಜೀವನ ಸಾಗಿಸುತ್ತಿರುವ ಅನೇಕರನ್ನು ಸಮಾಜ ಗುರುತಿಸುವ ಮೂಲಕ ಅವರನ್ನು ಗೌರವಿಸುವ ಕಾರ್ಯ ಮಾಡಿರುವದು ಸ್ತುತ್ಯಾರ್ಹ ಸಂಗತಿಯಾಗಿದೆ ಎಂದು ಕ್ರೈಂ ವಿಭಾಗದ ಪಿಎಸ್ಐ ಟಿ.ಕೆ. ರಾಥೋಡ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಅರಳು ವಿಶೇಷ ಅಗತ್ಯತೆಯುಳ್ಳ ವಸತಿ ರಹಿತ ಶಾಲೆಯಲ್ಲಿ ಶಿವಲಿಂಗಯ್ಯ ಹೊತಗಿಮಠ ಅವರ ಸ್ನೇಹಿತರ ಬಳಗದ ವತಿಯಿಂದ ಸಮಾಜದ ಕಾಯಕ ಜೀವಿಗಳನ್ನು ಗುರುತಿಸಿ ಸನ್ಮಾನಿಸುವ ವಿಶಿಷ್ಟ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ನಿಸ್ವಾರ್ಥದಿಂದ ತಮ್ಮ ಕೆಲಸವನ್ನು ನಿಭಾಯಿಸಿಕೊಂಡು ಹೋಗುವ ಅನೇಕರಿದ್ದು, ಅವರನ್ನು ಯಾವುದೇ ರೀತಿಯಲ್ಲಿ ಗುರುತಿಸುವ ಕಾರ್ಯ ನಡೆದಿಲ್ಲ. ಆದರೆ ಅವರು ಅದರ ಬಗ್ಗೆ ಚಿಂತನೆ ಮಾಡದೆ ತಮ್ಮ ಕಾಯಕದಲ್ಲಿ ನಿರತರಾಗಿರುತ್ತಾರೆ. ಅಂಥವರನ್ನು ಗೌರವಿಸುವ ಕಾರ್ಯ ಮಾಡಿರುವದು ಅರ್ಥಪೂರ್ಣ ಕಾರ್ಯಕ್ರಮವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸುನೀಲ ಮಹಾಂತಶೆಟ್ಟರ ಮಾತನಾಡಿ, ಹೊತಗಿಮಠ ಅವರು ತಮ್ಮ ಬಳಗವನ್ನೆಲ್ಲ ಸೇರಿಸಿ ಕಾಯಕಜೀವಿಗಳನ್ನು ಗುರುತಿಸುವದು ಹಾಗೂ ನಿತ್ಯ ಮಳೆ, ಚಳಿ ಎನ್ನದೆ ಪತ್ರಿಕಾ ವಿತರಣೆ ಮಾಡುವ ವಿತರಕರಿಗೆ ಬ್ಯಾಗ್ ನೀಡುವ ಮೂಲಕ ಸಮಾಜಕ್ಕೆ ಒಂದು ಸಂದೇಶವನ್ನು ನೀಡಿದ್ದಾರೆ ಎಂದರು. ಆನಂದ ಗಡ್ಡದೇವರಮಠ, ಪ್ರೇಮಾವತಿ ಹೊತಗಿಮಠ, ಚಂಬಣ್ಣ ಬಾಳಿಕಾಯಿ, ಪ್ರಕಾಶ ಉಪನಾಳ, ಸಿಡಿಪಿಓ ಮೃತ್ಯುಂಜಯ ಜಿ, ಡಾ. ಶ್ರೀಕಾಂತ ಕಾಟೇವಾಲೆ, ಗಂಗಾಧರ ಮೆಣಸಿನಕಾಯಿ, ನಾಗರಾಜ ಹಣಗಿ, ನವೀನ ಬೆಳ್ಳಟ್ಟಿ, ಗಿರೀಶ ಚೌರಡ್ಡಿ, ಬಸವರಾಜ ಚಕ್ರಸಾಲಿ, ಸುವರ್ಣಾಬಾಯಿ ಬಹದ್ದೂರ ದೇಸಾಯಿ, ರತ್ನಾ ಕರ್ಕಿ, ನಂದಾ ಧರ್ಮಾಯತ, ಕಾವ್ಯಾ ದೇಸಾಯಿ, ಸಂಗೀತಾ ಧರ್ಮಾಯತ, ಸಂಸ್ಥೆಯ ನೀಲಮ್ಮ ದಾಸಪ್ಪನವರ ಹಾಗೂ ಶಿಕ್ಷಕರು, ನಿರ್ಮಲಾ ಅರಳಿ ಸೇರಿದಂತೆ ಅನೇಕರಿದ್ದರು.

ಇದೇ ಸಂದರ್ಭದಲ್ಲಿ ಕಾಯಕಜೀವಿಗಳಾದ ಚನ್ನಬಸಪ್ಪ ಕುಂಬಿ, ಮುತ್ತಪ್ಪ ಶಿರಹಟ್ಟಿ, ಜ್ಯೋತಿ ಹೂಗಾರ, ಗೋಣೆಪ್ಪ ಗಡದವರ ಅವರನ್ನು ಗೌರವಿಸಲಾಯಿತು. ಶಿವಲಿಂಗಯ್ಯ ಹೊತಗಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಶೋಕ ಸೊರಟೂರ ಸ್ವಾಗತಿಸಿದರು. ಸುನೀತಾ ದಾಸಪ್ಪನವರ ನಿರೂಪಿಸಿದರು, ಮಾಳಿಂಗರಾಯ ಪೂಜಾರ ವಂದಿಸಿದರು.

## ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ ದತ್ತಿ ಉಪನ್ಯಾಸ

# ನಮ್ಮ ಆರೋಗ್ಯ ನಮ್ಮ ಅಂಗೈಯಲ್ಲಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯನ ದೇಹವು ಪಂಚಭೂತಗಳಿಂದ ಕೂಡಿರುತ್ತದೆ. ದೇಹದಲ್ಲಿ ಒಂದು ಅಂಶ ಕಡಿಮೆಯಾದರೂ ಆರೋಗ್ಯದಲ್ಲಿ ಏರುಪೇರು ಉಂಟಾಗಿ ಅನೇಕ ತೊಂದರೆಗಳನ್ನು ಎದುರಿಸಬೇಕಾಗುತ್ತದೆ. ಇಂದಿನ ಆಧುನಿಕ ಹಾಗೂ ತಂತ್ರಜ್ಞಾನದ ಯುಗದಲ್ಲಿ ಎಲ್ಲರೂ ಒತ್ತಡಕ್ಕೆ ಒಳಗಾಗುತ್ತಾರೆ. ಇದರಿಂದ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಕಡಿಮೆಯಾಗಿ ತೊಂದರೆಯನ್ನು ಅನುಭವಿಸುವಂತಾಗಿದೆ ಎಂದು ಅನುಷಾ ಮುದಗಲ್ ಹೇಳಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಏರ್ಪಡಿಸಿದ್ದ ದಿ. ಶ್ರೀ ಸಂಗನಬಸಯ್ಯ ನಿಂಗಯ್ಯ ಮದರಿಮಠ ಇವರ ಸ್ಮಾರಕ ದತ್ತಿ ಉಪನ್ಯಾಸದಲ್ಲಿ 'ಅಂಗೈಯಲ್ಲಿ ಆರೋಗ್ಯ'ವಿಷಯದ ಕುರಿತು ಅವರು ಮಾತನಾಡಿದರು.




ಗುರುರಾಜ ಪೂಜಾರ ಮಾತನಾಡಿ, ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿಯನ್ನು ವಹಿಸಬೇಕು. ಆದಷ್ಟು ನೈಸರ್ಗಿಕವಾಗಿ ಬೆಳೆದಿರುವ ಸಾವಯವ ಪದಾರ್ಥಗಳನ್ನು ಉಪಯೋಗಿಸಲು ಮುಂದಾಗಬೇಕು. ಒಂದೊಂದು ಬಣ್ಣಕ್ಕೆ ಒಂದೊಂದು ಶಕ್ತಿ ಇರುತ್ತದೆ. ಅದನ್ನು ತಿಳಿದುಕೊಂಡು ಅಂಗೈಯಲ್ಲಿ ಆ ಬಣ್ಣವನ್ನು ಅಳವಡಿಸಿಕೊಂಡಾಗ ನಿರ್ದಿಷ್ಟವಾದ ರೋಗದಿಂದ ಮುಕ್ತಿ ಪಡೆಯಬಹುದು. ಪ್ರತಿದಿನ ಮನೆಯಲ್ಲಿ ವ್ಯಾಯಾಮ, ಜ್ಞಾನ ಮತ್ತು ಕಲರ್ ಥೆರಫಿ ಮಾಡಿಕೊಳ್ಳುವುದರಿಂದ ಆರೋಗ್ಯದಲ್ಲಿ ಚೈತನ್ಯವನ್ನು ಕಾಣಬಹುದು ಎಂದರು.

ದತ್ತಿ ಉಪನ್ಯಾಸ ಉಪ ಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ ಮಾತನಾಡುತ್ತಾ, ಒತ್ತಡದ ಬದುಕಿನಲ್ಲಿ ಆರೋಗ್ಯದ ಕಡೆಗೆ ಗಮನ ನೀಡದೇ ಅನೇಕ ತೊಂದರೆಗಳನ್ನು ಎದುರಿಸುವುದು ಸಹಜವಾಗಿದೆ. ಇಂದು ವಾಣಿಜ್ಯೋದ್ಯಮ ಮತ್ತು ಇಡೀ ಜಗತ್ತು ಅಂಗೈಯಲ್ಲಿ ಇದೆ ಎಂಬ ಭಾವನೆಯಿಂದ ಒತ್ತಡದಲ್ಲಿ ವ್ಯವಹಾರವನ್ನು ಮಾಡುತ್ತಿದ್ದೇವೆ. ಆದರೆ ಅದೇ ಅಂಗೈಯಲ್ಲಿ ಆರೋಗ್ಯವನ್ನು ಕಾಪಾಡಿಕೊಳ್ಳುವ ಶಕ್ತಿಯೂ ಇದೆ ಎನ್ನುವುದನ್ನು ನಾವು ಅರಿತುಕೊಳ್ಳುವುದು ಅವಶ್ಯಕ ಎಂದರು.

ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ, ಉಪಾಧ್ಯಕ್ಷರಾದ ಸುಜಾತಾ ಎಸ್. ಗುಡಿಮನಿ ಪ್ರಾರ್ಥಿಸಿದರು. ಕುಮಾರ ಆರ್ಯನ್ ಹಿರೇಮಠ ವಚನ ಪಠಿಸಿದರು. ಲಿಂಗೈಕ್ಯರಾದ ದಿ. ಸಂಗನಬಸಯ್ಯ ನಿಂಗಯ್ಯ ಮದರಿಮಠ ಇವರ ಪರಿಚಯವನ್ನು ಮಹಿಳಾ ಘಟಕದ ಸದಸ್ಯರಾದ ವಿಮಲಾ ಪರ್ವತಗೌಡ್ರ ನಡೆಸಿಕೊಟ್ಟರು. ಅತಿಥಿಗಳ ಪರಿಚಯವನ್ನು ಮಹಿಳಾ ಘಟಕದ ಮಾಜಿ ಅಧ್ಯಕ್ಷರಾದ ಜಯಶ್ರೀ ಉಮೇಶ ಹುಬ್ಬಳ್ಳಿ ಮಾಡಿದರು. ಮಹಿಳಾ ಘಟಕದ ಗೌರವ ಕಾರ್ಯದರ್ಶಿ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು ಎಂದು ಸಂಸ್ಥೆಯ ಮಹಿಳಾ ಘಟಕದ ಗೌರವ ಕಾರ್ಯದರ್ಶಿ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿರುಪಯುಕ್ತ ವಾಹನ ಬಹಿರಂಗ ಹರಾಜು

■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆಯ ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ, ಗದಗ ಜಿಲ್ಲೆ, ಗದಗ ಈ ಕಚೇರಿಯ ನಿರುಪಯುಕ್ತ ವಾಹನ ಸಂಖ್ಯೆ-ಕೆ.ಎ.26 ಜಿ-206 ಇರುತ್ತದೆ. ಮಾಡಲ್ ಟಾಟಾ ಸುಮೋ ವಿಕ್ಟಾ 2006 ಈ ವಾಹನವನ್ನು ಜಿಲ್ಲಾಡಳಿತ ಭವನದ ಆವರಣದಲ್ಲಿ (ಹಿಂದುಗಡೆ) ಬಹಿರಂಗ ಹರಾಜು ಮಾಡಲಾಗುವದು.

ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತರು ರೂ. 2,000/- ಗಳ ಠೇವಣಿಯನ್ನು ದಿನಾಂಕ: 19-09-2025 ರ ಮಧ್ಯಾಹ್ನ 12.00 ಗಂಟೆ ಒಳಗಾಗಿ ಮುಂಗಡ ಪಾವತಿಸಿ, ಮಧ್ಯಾಹ್ನ 3.00 ಗಂಟೆಗೆ ನಿರುಪಯುಕ್ತ ವಾಹನ ಹರಾಜಿನಲ್ಲಿ ಭಾಗವಹಿಸುವುದು ಹಾಗೂ ಯಶಸ್ವಿ ಬಿಡ್ಡದಾರರು ಸಂಪೂರ್ಣ ಹಣವನ್ನು ಪಾವತಿಸಿದ ನಂತರವೇ ವಾಹನವನ್ನು ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ, ಗದಗ ಜಿಲ್ಲಾಡಳಿತ ಭವನ ಕೊ.ಸಂ.125 ಇಲ್ಲಿ ಸಂಪರ್ಕಿಸಬಹುದಾಗಿದೆ.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗೆ ಮೀನುಗಾರಿಕೆ ಇಲಾಖೆ ವತಿಯಿಂದ ರಾಜ್ಯ ವಲಯ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದ ಮೀನುಗಾರಿಕೆ ಸಹಕಾರಿ ಸಂಘದ ಸದಸ್ಯರು, ನೋಂದಾಯಿತ ಮೀನು ಮಾರಾಟಗಾರರಿಗೆ, ಮೀನು ಸಾಗಾಣಿಕೆ ಮತ್ತು ಮಾರಾಟಕ್ಕಾಗಿ ನಾಲ್ಕು ಚಕ್ರದ ವಾಹನ ಖರೀದಿಸಲು ಗದಗ ಜಿಲ್ಲೆಗೆ ಪರಿಶಿಷ್ಟ ಜಾತಿ-02 ಮತ್ತು ಪರಿಶಿಷ್ಟ ಪಂಗಡ-01 ಗುರಿ ನಿಗದಿಪಡಿಸಿದ್ದು, ಯೋಜನೆಯ ನಿಯಮಾವಳಿ ಅನ್ವಯ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನ ಸೆಪ್ಟೆಂಬರ್ 20 ಆಗಿದ್ದು ಗದಗ, ರೋಣ, ಗಜೇಂದ್ರಗಡ, ನರಗುಂದ ತಾಲೂಕಿನ ಸಂಬಂಧಿಸಿದಂತೆ ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ ಕಚೇರಿಗೆ ಹಾಗೂ ಶಿರಹಟ್ಟಿ, ಮುಂಡರಗಿ, ಲಕ್ಷ್ಮೇಶ್ವರ ತಾಲೂಕಿಗೆ ಸಂಬಂಧಿಸಿದಂತೆ ಮೀನುಗಾರಿಕೆ ಸಹಾಯಕ ನಿರ್ದೇಶಕರು ಮುಂಡರಗಿ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ/ಮುಂಡರಗಿ ಮೊಬೈಲ್ ದೂರವಾಣಿ ಸಂಖ್ಯೆ:8095792530 ಸಂಪರ್ಕಿಸಬಹುದಾಗಿದೆ.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಖಾಲಿ ಇರುವ ಶಿರಹಟ್ಟಿ ತಾಲೂಕಿನ ಮಜ್ಜೂರ, ಗದಗ ತಾಲೂಕಿನ ಕುರ್ತಕೋಟಿ ಗ್ರಾಮ ಪಂಚಾಯತಿಗಳ ಗ್ರಾಮ ಒನ್ ಕೇಂದ್ರಗಳಿಗೆ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ದಿ: 15-9-2025 ರೊಳಗಾಗಿ ಅರ್ಜಿಗಳನ್ನು https://www.karnatakaone.gov.in/Public/GramOneFranchiseeTerms ನಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಗದಗ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತ ಕೃಷಿ ಪ್ರಧಾನ ರಾಷ್ಟ್ರ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭಾರತವು ಕೃಷಿ ಪ್ರಧಾನ ರಾಷ್ಟ್ರವಾಗಿದೆ. ಭಾರತೀಯ ಕಿಸಾನ ಸಂಘಟನೆ ರೈತರಿಗೆ ಪೂರಕವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಭಾರತೀಯ ಕಿಸಾನ ಸಂಘದ ಉಪಪ್ರಾಂತ ಅಧ್ಯಕ್ಷ ವಿವೇಕ ಮೋರೆ ಹೇಳಿದರು.

ನರೇಗಲ್ಲ ಕೆಎಸ್ಎಸ್ ಕಾಲೇಜು ಸಭಾಂಗಣದಲ್ಲಿ ನಡೆದ ಭಾರತೀಯ ಕಿಸಾನ ಸಂಘ ಕರ್ನಾಟಕ ಪ್ರದೇಶ, ಗಜೇಂದ್ರಗಡ ತಾಲೂಕಾ ಪ್ರಶಿಕ್ಷಣ ವರ್ಗದ ಒಂದು ದಿನದ ಕಾರ್ಯಾಗಾರವನ್ನುದ್ದೇಶಿಸಿ ಅವರು ಮಾತನಾಡಿದರು.

ರೈತ ಈ ರಾಷ್ಟ್ರದ ಅನ್ನದಾತ. ಅನ್ನ ನೀಡುವ ರೈತನನ್ನೇ ಸರಕಾರ ಮತ್ತು ಚುನಾಯಿತಗೊಂಡ ಜನಪ್ರತಿನಿಧಿಗಳು, ಅಧಿಕಾರಿಗಳು ಕಡೆಗಣಿಸುತ್ತಿರುವುದು ಖಂಡನೀಯ. ಅಂತಹವರ ವಿರುದ್ಧ ಧ್ವನಿಯಾಗಲು ರೈತ ಸಂಘಟನೆ ಅತಿ ಅವಶ್ಯಕವಾಗಿದೆ. ರೈತ ಸಂಘಟನೆ ಗ್ರಾಮ ಸಮಿತಿಯು 9 ಪದಾಧಿಕಾರಿಗಳನ್ನು ಒಳಗೊಂಡಿರುತ್ತದೆ. ಪ್ರತಿ ತಿಂಗಳಿಗೊಮ್ಮೆ ತಮ್ಮ ಸಮಸ್ಯೆಗಳ ವಿಚಾರ ವಿನಿಮಯಕ್ಕೆ ಒಗ್ಗೂಡಬೇಕಾಗುತ್ತದೆ. ಗ್ರಾಮ, ಜಿಲ್ಲೆ, ಪ್ರಾಂತ ಹೀಗೆ ಹಲವಾರು ವಿಭಾಗಗಳಲ್ಲಿ ನಿರಂತರ ಕಾರ್ಯ ನಿರ್ವಹಿಸಲಿವೆ ಎಂದರು.

ಪ್ರಾಂತ ಕಾರ್ಯದರ್ಶಿ ಶಿವಕುಮಾರ ಗಾಣಗಿ ಮಾತನಾಡಿ, ರೈತರು ಕೃಷಿಯಲ್ಲಿ ಆಸಕ್ತಿಯಿಂದ ತೊಡಗಿ ಇಂದಿನ ಆಧುನಿಕತೆಗೆ ಅನುಗುಣವಾಗಿ ಪ್ರಗತಿಯತ್ತ ಸಾಗಬೇಕು. ರೈತರು ವಿವಿಧ, ವಿಭಿನ್ನ ಬೆಳೆ ಬೆಳೆಯಲು ಮುಂದಾಗಬೇಕು. ಅತಿವೃಷ್ಟಿ, ಅನಾವೃಷ್ಟಿಗೆ ಬೆಳೆದ ಪೈರು ನಷ್ಟವಾದ ಸಂದರ್ಭದಲ್ಲಿ ರೈತರು ಒಗ್ಗೂಡಿ ರಚನಾತ್ಮಕ ಹೋರಾಟದ ಮೂಲಕ ಸಂಘಟನೆಗೆ ಮುಂದಾಗಬೇಕೆಂದರು.

ಪ್ರಾಂತ ಸಂಘಟನಾ ಕಾರ್ಯದರ್ಶಿ ಪುಟ್ಟಸ್ವಾಮಿ, ಗದಗ ಜಿಲ್ಲಾಧ್ಯಕ್ಷ ಸಂಗನಗೌಡ ಪಾಟೀಲ, ಪ್ರಾಂತ ಪ್ರಧಾನ ಕಾರ್ಯದರ್ಶಿ ಜಗದೀಶ ಸಂಕನಗೌಡ್ರ, ತಾಲೂಕಾಧ್ಯಕ್ಷ ಮಲ್ಲನಗೌಡ ಪಾಟೀಲ, ಕಾರ್ಯದರ್ಶಿ ರವಿ ಮ್ಯಾಗೇರಿ, ಉಮೇಶ ಪಾಟೀಲ, ರಾಜಶೇಖರಗೌಡ ಪಾಟೀಲ, ಶಿವುಕುಮಾರ ಮಾವಿನಕಾಯಿ ಮುಂತಾದವರಿದ್ದರು.

## ಶ್ರೀ ಪ್ರಸನ್ನ ಗಣಪತಿ ಭಕ್ತ ಮಂಡಳಿ ಆಯೋಜಿಸಿದ್ದ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು


# ಭಾರತ ಆಧ್ಯಾತ್ಮದ ತವರೂರು

■ವಿಜಯಸಾಕ್ಷಿ ಸುದ್ದಿ, ಅರಸೀಕೆರೆ

ಭಾರತೀಯ ಸಂಸ್ಕೃತಿಯಲ್ಲಿ ಹಬ್ಬಗಳಿಗೆ ಬಹಳ ಮಹತ್ವವಿದೆ. ಜನಮನದ ಮೇಲೆ ಹಬ್ಬಗಳು ಅಗಾಧ ಪರಿಣಾಮವನ್ನು ಉಂಟುಮಾಡುತ್ತವೆ. ಬತ್ತಿ ಬಳಲಿರುವ ಮನಸ್ಸಿಗೆ ಹಬ್ಬಗಳು ಹೊಸ ಉತ್ಸಾಹ ಮತ್ತು ಸ್ಫೂರ್ತಿಯನ್ನು ತರುತ್ತವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ನಗರದ ಶ್ರೀ ಪ್ರಸನ್ನ ಗಣಪತಿ ಭಕ್ತ ಮಂಡಳಿಯಿಂದ ಸಂಘಟಿಸಿದ 84ನೇ ವರ್ಷದ ಗಜಾನನೋತ್ಸವದ ಅಂಗವಾಗಿ ಜರುಗಿದ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಾರತ ಆಧ್ಯಾತ್ಮದ ತವರೂರು. ಇಲ್ಲಿರುವಷ್ಟು ದೇವಾಲಯಗಳು ಬೇರೆಲ್ಲಿಯೂ ಇಲ್ಲ. ಎಲ್ಲ ಹಬ್ಬಗಳ ಗುರಿ ಸಮಾಜದಲಿ ಶಾಂತಿ, ಸಾಮರಸ್ಯ ಮತ್ತು ಸಂಘಟನೆ ಉಂಟು ಮಾಡುವುದೇ ಆಗಿದೆ. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಬಾಲಗಂಗಾಧರ ಟಿಳಕರು ಸಾರ್ವಜನಿಕ ಗಣೇಶೋತ್ಸವ ನೆರವೇರಿಸುವುದರ ಮೂಲಕ ಎಲ್ಲರನ್ನು ಒಗ್ಗೂಡಿಸುವ ಮಹತ್ಕಾರ್ಯ ಮಾಡಿದರು. ಹಬ್ಬಗಳ ಹಿಂದಿರುವ ತಾತ್ವಿಕ ಚಿಂತನಗಳನ್ನು ಅರಿತು ಬಾಳುವುದು ಎಲ್ಲರ ಗುರಿಯಾಗಬೇಕಾಗಿದೆ ಎಂದರು.



ನೇತೃತ್ವ ವಹಿಸಿದ ದೊಡ್ಡಗುಣಿ ಹಿರೇಮಠದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಎಲ್ಲ ಭೌತಿಕ ಸಂಪನ್ಮೂಲ ಹೊಂದಿದ್ದರೂ ಮನುಷ್ಯನಿಗೆ ಮಾನಸಿಕ ಶಾಂತಿ, ನೆಮ್ಮದಿಯಿಲ್ಲ. ಸುಖ-ಶಾಂತಿಯ ಬದುಕಿಗೆ ಧರ್ಮವೊಂದೇ ಆಶಾಕಿರಣ. ಅವರವರ ಧರ್ಮ ಅವರವರು ಆಚರಿಸಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ಬೆಳೆಸಿಕೊಂಡು ಬರಬೇಕೆಂದರು.

ಶಾಸಕ ಕೆ.ಎಂ. ಶಿವಲಿಂಗೇಗೌಡರು ಸಮಾರಂಭ ಉದ್ಘಾಟಿಸಿ ಮಾತನಾಡಿ, ಮಾನವ ಜೀವನದ ಉನ್ನತಿಗೆ ಮತ್ತು ಉಜ್ವಲ ಭವಿಷ್ಯಕ್ಕೆ ಧರ್ಮಾಚರಣೆ ಮುಖ್ಯ. ವಿಘ್ನ ವಿನಾಶಕನಾದ ಗಣಪತಿ ಎಲ್ಲರೂ ಪೂಜಿಸುವ ದೈವ. ಗಣಪತಿಯ ಬುದ್ಧಿಶಕ್ತಿ, ದೂರದೃಷ್ಟಿ ಮತ್ತು ಲೋಕಾನುಗ್ರಹ ಚಿಂತನೆ ನಮ್ಮೆಲ್ಲರ ಬಾಳಿನಲ್ಲಿ ಬೆಳಕು ಮೂಡಿಸಲೆಂದರು.

ಮಾಜಿ ಶಾಸಕ ಕೆ.ಪಿ. ಪ್ರಭುಕುಮಾರ ಮತ್ತು ಜಿ.ಎಸ್. ಪರಮೇಶ್ವರಪ್ಪ ನುಡಿ ನಮನ ಸಲ್ಲಿಸಿದರು. ಶ್ರೀ ಪ್ರಸನ್ನ ಗಣಪತಿ ಭಕ್ತ ಮಂಡಳಿ ಅಧ್ಯಕ್ಷ ರವೀಂದ್ರನಾಥ, ಕಾರ್ಯದರ್ಶಿ ವೆಂಕಟೇಶ ಬಾಬು, ಖಜಾಂಚಿ ನಾಗಭೂಷಣ ಮುಂತಾದವರಿದ್ದರು. ಅರಸೀಕೆರೆಯ ಬಸವರಾಜು (ಮಂಡಿ), ಗೀತಾ ಮತ್ತು ಮಕ್ಕಳು ದಾಸೋಹ ಸೇವೆ ಸಲ್ಲಿಸಿದರು.

## ಸನಾತನ ಧರ್ಮದ ಕುರಿತ ನನ್ನ ತಿರುಚಿದ ಹೇಳಿಕೆ ಹರಡಲಾಗಿದೆ: ಉದಯನಿಧಿ ಸ್ಟಾಲಿನ್



■ವಿಜಯಸಾಕ್ಷಿ ಸುದ್ದಿ, ತಮಿಳನಾಡು

ತಾನು ನಕಲಿ ಸುದ್ದಿಗಳ ದಾಳಿಗೆ ಒಳಗಾಗಿದ್ದು, ಸನಾತನ ಧರ್ಮದ ಕುರಿತ ಮಾತುಗಳನ್ನು ತಿರುಚಿ ದೇಶಾದ್ಯಂತ ಹರಡಿದ ನಂತರ ನನ್ನ ತಲೆಗೆ ಬೆಲೆಯನ್ನೂ ನಿಗದಿಪಡಿಸಲಾಗಿದೆ ಎಂದು ತಮಿಳುನಾಡಿನ ಉಪಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ ಅವರು ಹೇಳಿದ್ದಾರೆ. ಸಮಾನತೆ ಮತ್ತು ಸಾಮಾಜಿಕ ಸಾಮರಸ್ಯದ ಕುರಿತಾದ ಚರ್ಚೆಯ ಸಂದರ್ಭದಲ್ಲಿ "ಸನಾತನ ಧರ್ಮ"ದ ಕುರಿತು ನೀಡಿದ ತಮ್ಮ ಹೇಳಿಕೆಗಳನ್ನು ಉದ್ದೇಶಪೂರ್ವಕವಾಗಿ ತಪ್ಪು ಮಾಹಿತಿ ಮತ್ತು ದ್ವೇಷವನ್ನು ಪ್ರಚೋದಿಸಲು ತಿರುಚಲಾಗಿದೆ ಎಂದು ಅವರು ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮಗಳು ಒಡ್ಡುವ ಸವಾಲುಗಳ ಕುರಿತು ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ತಪ್ಪು ಮಾಹಿತಿಯ ಅಪಾಯಗಳನ್ನು ಒತ್ತಿ ಹೇಳಿದರು. "ಒಂದು ತಪ್ಪು ಮಾಹಿತಿಯನ್ನು ಯಾವುದೇ ಗುಪ್ತ ಕಾರ್ಯಸೂಚಿ ಇಲ್ಲದೆ ಹರಡಿದರೆ, ಗುಪ್ತ ಕಾರ್ಯಸೂಚಿಯೊಂದಿಗೆ ಯೋಜಿತ ಸುದ್ದಿಯಾಗುತ್ತದೆ. ತಪ್ಪು ಮಾಹಿತಿ ಅತ್ಯಂತ ಅಪಾಯಕಾರಿ" ಎಂದು ಅಭಿಪ್ರಾಯಪಟ್ಟರು.

"ಜಾಗತಿಕ ಅಪಾಯ ವರದಿ-2024 ರಲ್ಲಿ, ತಪ್ಪು ಮಾಹಿತಿಯನ್ನು ಜಾಗತಿಕವಾಗಿ ಎರಡನೇ ಅತಿದೊಡ್ಡ ಬೆದರಿಕೆ ಎಂದು ಹೇಳುತ್ತದೆ.

### ನಾಲ್ಕು ವರ್ಷದ ಪುಟ್ಟ ಹುಡುಗನ ಮೇಲೆರಗಿದ ಬೀದಿ ನಾಯಿ | ತಲೆಗೆ ಗಾಯ

# ನಾಯಿ'ಗೋಳು' ಸಾರ್....

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಹೆಚ್ಚುತ್ತಿರುವ ಬೀದಿ ನಾಯಿಗಳ ಹಾವಳಿಯಿಂದ ಜನತೆ ಬೆಚ್ಚಿ ಬೀಳುವಂತಾಗಿದ್ದು, ಮಕ್ಕಳನ್ನು ಒಂಟಿಯಾಗಿ ಹೊರಬಿಡದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮನೆ ಮುಂದೆ ಆಟ ಆಡುತ್ತಿರುವ ಚಿಕ್ಕ ಮಕ್ಕಳ ಮೇಲೆ ಬೀದಿ ನಾಯಿಗಳು ದಾಳಿ ಮಾಡುತ್ತಿವೆ. ನಿತ್ಯವೂ ಒಂದಿಲ್ಲೊಂದು ಕಡೆ ನಾಯಿ ಕಡಿತದಿಂದ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೊಳಪಡುವ ಘಟನೆ ನಡೆಯುತ್ತಲೇ ಇವೆ. ಇದಕ್ಕೆ ಸಾಕ್ಷಿ ಎಂಬಂತೆ ಬುಧವಾರವಷ್ಟೇ ಪಟ್ಟಣದ ಮ್ಯಾಗೇರಿ ಓಣಿಯಲ್ಲಿ



ಮನೆಯ ಮುಂದೆ ಆಟವಾಡುತ್ತಿದ್ದ 4 ವರ್ಷದ ಮನೋಜ್ ಸೋಮಪ್ಪ ಬನ್ನಿ ಎಂಬ ಪುಟ್ಟ ಬಾಲಕನ ಮೇಲೆ ಬೀದಿ ನಾಯಿಯೊಂದು ದಾಳಿ ಮಾಡಿದೆ.

ಬಾಲಕನ ತಲೆಯ ಭಾಗಕ್ಕೇ ಬಾಯಿ ಹಾಕಿದ ಸಂದರ್ಭದಲ್ಲಿ ಕಿರುಚಾಡಿದ ಬಾಲಕನನ್ನು ಕಂಡು ಸಾರ್ವಜನಿಕರು ನಾಯಿಯನ್ನು ಹೊಡೆದು ಓಡಿಸಿ ಬಾಲಕನ ರಕ್ಷಿಸಿದ್ದಾರೆ. ಕೂಡಲೇ ಪಾಲಕರು ಮಗುವಿಗೆ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ ಜಿಲ್ಲಾಸ್ಪತ್ರೆಗೆ ಕರೆದೊಯ್ದಿದ್ದಾರೆ.

ಒಟ್ಟಿನಲ್ಲಿ ಪಟ್ಟಣದಲ್ಲಿ ಹಿಂಡು ನಾಯಿಗಳ ಮೃಗೀಯ ವರ್ತನೆಯಿಂದ ಪಾಲಕರು ಬೆಚ್ಚಿ ಬಿದ್ದಿದ್ದಾರೆ. ಮಕ್ಕಳನ್ನು ಶಾಲೆಗೆ, ಆಟಕ್ಕೆ ಬಿಡಲು ಹೆದರುತ್ತಿದ್ದಾರೆ.

ಅಲ್ಲದೇ ಬೆಳಿಗ್ಗೆ ಹಾಲು, ಪೇಪರ್, ಹೂವು, ಹಣ್ಣು, ತರಕಾರಿ ಮಾರಾಟಗರರು ಎಡಗೈ ಮುಷ್ಠಿಯಲ್ಲಿ ಜೀವ ಹಿಡಿದು ಕಾರ್ಯ ನಿರ್ವಹಿಸುವ ಪರಿಸ್ಥಿತಿಯಿದೆ. ಸಂಚಾರದ ವೇಳೆ ಬೈಕ್ ಸವಾರರನ್ನು ಬೆನ್ನಟ್ಟುವ ನಾಯಿಗಳಿಂದ ಪಾರಾಗಲು ಹೋಗಿ ಸವಾರರು ಅಪಘಾತಕ್ಕೀಡಾಗುತ್ತಿದ್ದಾರೆ. ವಾಯು ವಿಹಾರಿಗಳು, ಮಹಿಳೆಯರು, ಮಕ್ಕಳು, ವಯೋವೃದ್ಧರಲ್ಲಿಯೂ ನಾಯಿಗಳ ಭಯ ಕಾಡುತ್ತಿದೆ.

ಹೆಚ್ಚುತ್ತಿರುವ ಬೀದಿ ನಾಯಿಗಳ ಸಂಖ್ಯೆಯ ನಿಯಂತ್ರಣಕ್ಕೆ ಸಂತಾನ ಹರಣ ಚಿಕಿತ್ಸೆ ಸೇರಿ ಕೈಗೊಳ್ಳಬೇಕಾದ ನಿಯಂತ್ರಣ ಕ್ರಮಗಳ ಬಗ್ಗೆ ಸ್ಥಳೀಯ ಪುರಸಭೆ, ಗ್ರಾ.ಪಂನವರು ತಲೆ ಕೆಡಿಸಿಕೊಂಡಿಲ್ಲ. ಇದರಿಂದ ಅವುಗಳ ಸಂಖ್ಯೆ ದುಪ್ಪಟ್ಟಾಗಿದ್ದು, ಈಗ ಇಡೀ ವಾತಾವರಣವನ್ನೆ ಹದಗೆಡಿಸಿದೆ.

ಈ ಬಗ್ಗೆ ಸಾರ್ವಜನಿಕರು ಅನೇಕ ಬಾರಿ ಮೌಖಿಕವಾಗಿ ಮತ್ತು ಲಿಖಿತವಾಗಿ ಪುರಸಭೆಗೆ ಮನವಿ ಮಾಡಿದ್ದರೂ ಕಾಟಾಚಾರದ ಕ್ರಮ ಕೈಗೊಂಡು ಸುಮ್ಮನಾಗುತ್ತಾರೆ. ಪಟ್ಟಣದ ಜನರ, ಮಕ್ಕಳ ಜೀವದ ದೃಷ್ಟಿಯಿಂದ ಬೀದಿ ನಾಯಿಗಳ ಸಂಖ್ಯೆ ನಿಯಂತ್ರಣ ಮಾಡಬೇಕು ಎಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.

### ಈದ್ ಮಿಲಾದುನ್ನಬಿ ಕಾರ್ಯಕ್ರಮದ ಕುರಿತ ಪತ್ರಿಕಾಗೋಷ್ಠಿಯಲ್ಲಿ ಹಸನಸಾಬ ತಟಗಾರ

# ಮುಹಮ್ಮದ್ ಪೈಗಂಬರರನ್ನು ಸ್ಮರಿಸೋಣ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪ್ರೀತಿ, ಮಮತೆ ಮತ್ತು ಶಾಂತಿಯ ಸಂದೇಶಗಳ ಮೂಲಕ ಒಂದು ಸಮಗ್ರ ಜೀವನ ವ್ಯವಸ್ಥೆಯನ್ನು ಸ್ಥಾಪಿಸಿ, ಅದನ್ನು ಇಡೀ ಜಗತ್ತಿಗೆ ಪಸರಿಸಿದ ಜಗತ್ತಿನ ಶ್ರೇಷ್ಠ ಸೌಹಾರ್ದತೆಯ ನಾಯಕ ಪ್ರವಾದಿ ಮುಹಮ್ಮದ್ ಸಲ್ಲಲ್ಲಾಹು ಅಲೈಹಿವಸಲ್ಲಂ ಎಂದು ಅಂಜುಮನ್ ಇಸ್ಲಾಂ ಕಮಿಟಿ ಚೇರಮನ್ ಹಸನಸಾಬ ತಟಗಾರ ಹೇಳಿದರು.

ನಗರದ ಶಾದಿಮಹಲ್‌ನಲ್ಲಿ ಹಜರತ್ ಮುಹಮ್ಮದ್ ಪೈಗಂಬರರ 1500ನೇ ಜನ್ಮದಿನೋತ್ಸವ ಈದ್ ಮಿಲಾದುನ್ನಬಿ ಕಾರ್ಯಕ್ರಮದ ಕುರಿತು ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಮಾತನಾಡಿ, ಮುಹಮ್ಮದ್ ಪೈಗಂಬರ್ ಮನುಕುಲದ ಪ್ರವಾದಿಯಾಗಿ ಶಾಂತಿದೂತರಾಗಿ ಜಗತ್ತಿಗೆ ನೀಡಿದ ಕೊಡುಗೆಗಳನ್ನು ನಾವಿಂದು ಅರ್ಥ ಮಾಡಿಕೊಳ್ಳಬೇಕಾಗಿದೆ. ಎಲ್ಲ ಧರ್ಮಗಳನ್ನು ಗೌರವಿಸುವ ಮೂಲಕ ಸುಂದರ ಸಮಾಜವನ್ನು ನಾವು ಕಟ್ಟಬೇಕಾಗಿದೆ. ಸಾಮಾಜಿಕ, ರಾಜಕೀಯ, ಧಾರ್ಮಿಕ, ಕೌಟುಂಬಿಕ, ಆರ್ಥಿಕ ಸೇರಿದಂತೆ ಮಾನವನ ಬದುಕಿಗೆ ಅಗತ್ಯದ ಸರ್ವ ಸಿದ್ಧಾಂತಗಳನ್ನು ವಿಶ್ವ ಪ್ರವಾದಿ ಪೈಗಂಬರರು ಪ್ರತಿಪಾದಿಸಿದ್ದರು. ಪ್ರವಾದಿಯವರು ಜನಿಸಿ 1500 ವರ್ಷಗಳಾಗಿದ್ದು, ವಿಶ್ವದಾದ್ಯಂತ ಈ ದಿನದಂದು ಸಂಭ್ರಮ ಸಡಗರದಿಂದ ಈದ್ ಮಿಲಾದಆಚರಣೆ ಮಾಡಲಾಗುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮಾಜಿ ಚೇರಮನ್ ಸುಭಾನಸಾಬ ಆರಗಿದ್ದಿ, ಎ.ಡಿ. ಕೋಲಕಾರ, ನಿರ್ದೇಶಕರಾದ ಶೌಕತ್ ಅಲಿ ಅರಳಿಕಟ್ಟಿ, ನಾಸೀರ್ ಸುರಪೂರ, ಅಬ್ದುಲಸಾಬ ಕಾತರಕಿ, ದಾದೇಸಾಬ ಹಣಗಿ, ಖಜಾಂಚಿ ಆಶ್ರಫಲಿ ಗೋಡೇಕಾರ, ದಾವಲಸಾಬ ಢಾಲಾಯತ್, ಖಾಸಿಂಸಾಬ ಮುಚ್ಚಾಲಿ, ಭಾಷೇಸಾಬ ಮುದಗಲ್ಲ, ಆರೀಫ್ ಮನಿಯಾರ್, ಇಮ್ರಾನ್ ಅತ್ತಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕಾರ್ಯದರ್ಶಿ ಫಯಾಜ್ ತೋಟದ ಮಾತನಾಡಿ, ಸೆಪ್ಟೆಂಬರ್ 4ರಂದು ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಶೇ.90ರಷ್ಟು ಅಂಕ ಪಡೆದ ವಿದ್ಯಾರ್ಥಿಗಳಿಗೆ, ಶಾಸಕರಿಗೆ ಸನ್ಮಾನ ಹಾಗೂ ಖುರಾನ ಹದಿಯಾ ಸಮಾರಂಭವಿದೆ. ಸೆಪ್ಟೆಂಬರ್ 5ರಂದು ಜಾಮೀಯಾ ಮಸೀದಿಯಿಂದ ಹಬ್ಬದ ಮೆರವಣಿಗೆ ಪ್ರಾರಂಭಗೊಂಡು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಪುನಃ ಶಾದಿಮಹಲ್‌ನಲ್ಲಿ ಫಾತಿಹಾಖಾನೆಯೊಂದಿಗೆ ಮುಕ್ತಾಗೊಳ್ಳಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಮುದಾಯ ಭಾಂದವರು ಪಾಲ್ಗೊಳ್ಳುವಂತೆ ತಿಳಿಸಿದರು.

## ಇಂದ್ರಿಯಗಳನ್ನು ನಿಗ್ರಹಿಸುವುದೇ ಸಂಯಮ ಧರ್ಮ




■ವಿಜಯಸಾಕ್ಷಿ ಸುದ್ದಿ, ಗದಗ

ಹಿಂಸೆಯನ್ನು ತ್ಯಾಗಮಾಡಿ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡು ಸಕಲ ಜೀವರಾಶಿಗಳ ರಕ್ಷಣೆಗೆ ನೆರವಾಗುತ್ತ ಇಂದ್ರಿಯಗಳನ್ನು ಮತ್ತು ಮನಸ್ಸನ್ನು ನಿಯಂತ್ರಿಸಿಕೊಳ್ಳುವುದು ಉತ್ತಮ ಸಂಯಮ ಧರ್ಮವಾಗಿದ್ದು, ಸಂಯಮ ಇಲ್ಲದವರು ಕ್ರೋಧಿತ ಮತ್ತು ವಿವೇಕರಹಿತರಾಗಿ ಹಿಂಸೆಯಲ್ಲಿ ತೊಡಗುತ್ತಾರೆಂದು ಜಯಶ್ರೀ ಎಫ್.ಬರಿಗಾಲಿ ಹೇಳಿದರು.

ಅವರು ಗದಗ ಜಿಲ್ಲಾ ದಿಗಂಬರ ಜೈನ ಸಂಘವು 'ದಶಲಕ್ಷಣ ಪರ್ವಾಚರಣೆ ಮತ್ತು ಸಮಾಜ ಸಂಪರ್ಕ ಸಭೆ' ಪ್ರಯುಕ್ತ ಲಕ್ಷ್ಮೇಶ್ವರದ ಅನಂತನಾಥ ತ್ರಿಕೂಟ ಬಸದಿಯಲ್ಲಿ ಆಯೋಜಿಸಿದ್ದ 'ಉತ್ತಮ ಸಂಯಮ ಧರ್ಮ' ಕಾರ್ಯಕ್ರಮದಲ್ಲಿ ಮಾತನಾಡುತ್ತ, ಕೆಲವರು ಕ್ಷಣಿಕ ಸುಖಕ್ಕಾಗಿ ಸಂಯಮ ರಹಿತರಾಗಿ ಅಗಾಧವಾದ, ದೀರ್ಘವಾದ ದುಃಖವನ್ನು ಅನುಭವಿಸುತ್ತಾರೆ. ಸಂಯಮವು ಆದರ್ಶ ಬದು-ಕಿಗೆ ಭೂಷಣವಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಬಿ.ಟಿ. ಬರಿಗಾಲಿ ಮಾತನಾಡಿ, ಸಂಯಮವಂತರು ಸಾಧಕ-ಬಾಧಕಗಳನ್ನು ಚೆನ್ನಾಗಿ ಅರಿತು ಸಾಧಕ ಅಂಶಗಳನ್ನು ಮಾತ್ರ ಸ್ವೀಕರಿಸಿ ತಮ್ಮ ಕಾರ್ಯದಲ್ಲಿ ಜಯಶಾಲಿಯಾಗುತ್ತಾರೆ. ಇಂಥವರು ಸಮಾಜದ ಗೌರವಕ್ಕೆ ಪಾತ್ರರಾಗುತ್ತಾರೆಂದು ಹೇಳಿದರು.

ಸಂಘದ ಅಧ್ಯಕ್ಷ ಪಿ.ಎ. ಕುಲಕರ್ಣಿ ಮಾತನಾಡಿ, ಸಂಘವು ಕಳೆದ 22 ವರ್ಷಗಳಿಂದ ಧಾರ್ಮಿಕ-ಸಾಮಾಜಿಕ ಕಾರ್ಯಗಳಲ್ಲಿ ನಿರತವಾಗಿದ್ದು, ಧರ್ಮ ಬಾಂಧವರು ಉದಾರವಾಗಿ ದಾನ ನೀಡಬೇಕೆಂದು ನಿವೇದಿಸಿದರು.

ಕಾರ್ಯಕ್ರಮದಲ್ಲಿ ಬಿ.ಎಸ್. ನಾವಳ್ಳಿ, ಯಶವಂತ ಸಿದ್ದಣ್ಣವರ, ಹನಮಂತಗೌಡ ಮತಗಟ್ಟಿ, ಆರ್.ಸಿ. ಪಾಟೀಲ, ಬಿ.ಎಸ್. ಘೊಂಗಡಿ, ಸಂತೋಷ ಗೋಗಿ, ವಾಸು ಪಾಟೀಲ, ಬ್ರಹ್ಮರಾಜ ಹೊಂಬಣ್ಣವರ ಸೇರಿದಂತೆ ಸ್ಥಳೀಯ ಜೈನ ಸಮಾಜದ ಪ್ರಮುಖರು, ಶ್ರಾವಕರು, ಶ್ರಾವಿಕೆಯರು ಪಾಲ್ಗೊಂಡಿದ್ದರು.

## ಬುದ್ಧಿಮಾಂದ್ಯ ಮಕ್ಕಳು ದೇವರಿಗೆ ಸಮಾನ



■ವಿಜಯಸಾಕ್ಷಿ ಸುದ್ದಿ, ರೋಣ

ಸಾಮಾಜಿಕ ಕಾರ್ಯ ಚಟುವಟಿಕೆಗಳ ಅರಿವು ಇಲ್ಲದ ಬುದ್ಧಿಮಾಂದ್ಯ ಮಕ್ಕಳು ದೇವರಿಗೆ ಸಮಾನ ಎಂದು ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ ಹೇಳಿದರು.

ಅವರು ಬುಧವಾರ ಜನ್ಮದಿನದ ನಿಮಿತ್ತ ಅಭಿಮಾನಿಗಳು ಹಮ್ಮಿಕೊಂಡಿದ್ದ ಬುದ್ಧಿಮಾಂದ್ಯ ಮಕ್ಕಳಿಗೆ ಹಣ್ಣು ಹಾಗೂ ಆಟಿಕೆ ಸಾಮಾಗ್ರಿಗಳ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಬುದ್ಧಿಮಾಂದ್ಯ ಮಕ್ಕಳಿಗೆ ಪ್ರಪಂಚದ ಬಗ್ಗೆ ತಿಳುವಳಿಕೆ ಇರುವುದಿಲ್ಲ. ಅಂತಹ ಮಕ್ಕಳ ದೈಹಿಕ ಸಾಮಾರ್ಥ್ಯವನ್ನು ಹೆಚ್ಚಿಸಲು ಅಗತ್ಯ ನೆರವು ನೀಡುವುದು ಇಂದಿನ ದಿನಮಾನಗಳಲ್ಲಿ ಅವಶ್ಯಕವಾಗಿದೆ. ಹೆತ್ತ ತಂದೆ-ತಾಯಿಗಳಿಗೆ ಎಲ್ಲ ಮಕ್ಕಳು ಸಹ ಮುದ್ದಾಗಿ ಕಾಣುವುದು ಪುಣ್ಯದ ಫಲವಾಗಿದ್ದು, ಚಿಕ್ಕ ವಯಸ್ಸಿನಲ್ಲಿ ಮಕ್ಕಳು ಬುದ್ಧಿಮಾಂದ್ಯರಾಗಿರಬಹುದು. ಆದರೆ ಒಳ್ಳೆಯ ಆರೈಕೆ ಸಿಕ್ಕರೆ ಅವರೂ ಸಹ ಸಮಾಜದ ಮುಖ್ಯ ವಾಹಿನಿಗೆ ಬರಬಲ್ಲರು ಎಂದರು.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಎಲ್ಲದಕ್ಕೂ ಪರಿಹಾರಗಳಿವೆ. ಮುಖ್ಯವಾಗಿ ಬುದ್ಧಿಮಾಂದ್ಯ ಮಕ್ಕಳಿಗೆ ಗುಣಮಟ್ಟದ ಆರೋಗ್ಯ ತಪಾಸಣೆ ನಡೆಯಬೇಕು. ಆ ನಿಟ್ಟಿನಲ್ಲಿ ಸರಕಾರಿ ಅಥವಾ ಖಾಸಗಿ ವೈದ್ಯರು ಈ ಮಕ್ಕಳ ಬಗ್ಗೆ ವಿಶೇಷ ಮುತುವರ್ಜಿಯನ್ನು ವಹಿಸಬೇಕು. ಮುಖ್ಯವಾಗಿ ಮಕ್ಕಳಿಗೆ ಧೈರ್ಯದ ಜೊತೆಗೆ ಸಂಭಾಷಣೆ ನಡೆಸುವ ಕಲಾತ್ಮಕ ವಿಷಯಗಳ ಕುರಿತು ತಿಳುವಳಿಕೆ ನೀಡಬೇಕು ಎಂದರು.

ಇದೇ ಸಂಧರ್ಭದಲ್ಲಿ ಅವರು ಬುದ್ಧಿಮಾಂದ್ಯ ಮಕ್ಕಳ ಆರೈಕೆ ಸಿಬ್ಬಂದಿಗಳಿಂದ ಅಗತ್ಯ ಮಾಹಿತಿ ಪಡೆದುಕೊಂಡರು. ಅಭಿಷೇಕ ನವಲಗುಂದ, ಮುತ್ತು ನವಲಗುಂದ, ಯಲ್ಲಪ್ಪ ಕಿರೇಸೂರ, ಮಹೇಶ ಕಳಸಣ್ಣವರ, ಅಸ್ಲಂ ಕೊಪ್ಪಳ, ಸೈಫ್ ತಹಸೀಲ್ದಾರ್, ವಿನಾಯಕ ಜಕ್ಕಣಗೌಡ್ರ, ಪ್ರದೀಪ ಯಳವತ್ತಿ, ಬಶೀರ ಕಟ್ಟಿಮನಿ, ಆಸ್ಪಾಕ ಮುಲ್ಲಾ, ಶಬಾಜ ಗದಗಕರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಅಸ್ಸಾಂನಲ್ಲಿ CAA ಅಡಿಯಲ್ಲಿ ಕೇವಲ ಮೂವರು ವಿದೇಶಿಯರಿಗೆ ಪೌರತ್ವ: ಮುಖ್ಯಮಂತ್ರಿ ಶರ್ಮಾ

■ವಿಜಯಸಾಕ್ಷಿ ಸುದ್ದಿ, ಗುವಾಹಟಿ

ಅಸ್ಸಾಂನಲ್ಲಿ ಪೌರತ್ವ (ತಿದ್ದುಪಡಿ) ಕಾಯ್ದೆ, 2019 (CAA) ಅಡಿಯಲ್ಲಿ ಕೇವಲ ಮೂವರು ವ್ಯಕ್ತಿಗಳಿಗೆ ಮಾತ್ರ ಭಾರತೀಯ ಪೌರತ್ವ ದೊರೆತಿದೆ ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಬುಧವಾರ ಹೇಳಿದ್ದಾರೆ.

ಇದು ಕಾಯ್ದೆಯ ಬಗ್ಗೆ ಇದ್ದ ವ್ಯಾಪಕ ಆತಂಕಗಳು ಮತ್ತು ವಿರೋಧದ ನಡುವೆ ಗಮನಾರ್ಹ ಬೆಳವಣಿಗೆಯಾಗಿದೆ. ಇದುವರೆಗೆ ಕೇವಲ 12 ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗಿದ್ದು, ಅದರಲ್ಲಿ ಮೂರು ಅರ್ಜಿಗಳನ್ನು ಅಂಗೀಕರಿಸಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಅಸ್ಸಾಂನಲ್ಲಿ ಸಿಎಎ ಜಾ-ರಿಯಾದಾಗ ಲಕ್ಷಾಂತರ ಬಾಂಗ್ಲಾದೇಶದ ಹಿಂದೂಗಳು ಭಾರತೀಯ ಪೌರತ್ವ ಪಡೆಯುತ್ತಾರೆ ಎಂಬ ಆತಂಕ ಹೆಚ್ಚಾಗಿತ್ತು. ವಿರೋಧ ಪಕ್ಷಗಳು ಮತ್ತು ನಾಗರಿಕ ಸಮಾಜದ ಗುಂಪುಗಳು ರಾಜ್ಯದ ಸ್ಥಳೀಯ ಜನಸಂಖ್ಯೆ ಮತ್ತು ಸಂಸ್ಕೃತಿಗೆ ಇದು ಅಪಾಯವನ್ನುಂಟು ಮಾಡುತ್ತದೆ ಎಂದು ವಾದಿಸಿದ್ದವು. ಇಂತಹ ಆತಂಕಗಳ ಮಧ್ಯೆ, ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಗುವಾಹಟಿಯಲ್ಲಿ ನಡೆದ ಸಾರ್ವಜನಿಕ ಕಾರ್ಯಕ್ರಮವೊಂದರ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಈ ವಾದಗಳ ಸತ್ಯಾಸತ್ಯತೆಯನ್ನು ಪ್ರಶ್ನಿಸಿದ್ದಾರೆ.

"ಅಸ್ಸಾಂನಲ್ಲಿ 20-25 ಲಕ್ಷ ಜನರು ಸಿಎಎ ಅಡಿಯಲ್ಲಿ ಪೌರತ್ವ ಪಡೆಯುತ್ತಾರೆ ಎಂದು ವ್ಯಾಪಕವಾಗಿ ಚರ್ಚೆಯಾಗುತ್ತಿತ್ತು. ಆದರೆ, ವಾಸ್ತವದಲ್ಲಿ ನಾವು ಇಲ್ಲಿಯವರೆಗೆ ಕೇವಲ 12 ಅರ್ಜಿಗಳನ್ನು ಮಾತ್ರ ಸ್ವೀಕರಿಸಿದ್ದೇವೆ" ಎಂದು ಶರ್ಮಾ ಹೇಳಿದರು. ಈ ಕಡಿಮೆ ಸಂಖ್ಯೆಯ ಅರ್ಜಿಗಳನ್ನು ಉಲ್ಲೇಖಿಸಿ, ಇಂತಹ ಸಣ್ಣ ಸಂಖ್ಯೆಯ ಪ್ರಕರಣಗಳ ಬಗ್ಗೆ ಮತ್ತಷ್ಟು ಚರ್ಚೆ ನಡೆಸುವುದು "ನಿಷ್ಪ್ರಯೋಜಕ" ಎಂದು ಅವರು ಅಭಿಪ್ರಾಯಪಟ್ಟರು.

## ಈದ್ ಮಿಲಾದ್ ದಿನದಂದು ಸಾರಾಯಿ ನಿಷೇಧಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿ ವರ್ಷ ಈದ್ ಮಿಲಾದ್ ದಿನದಂದು ಸರ್ಕಾರವು ಸಾರಾಯಿ ನಿಷೇಧಿಸಬೇಕೆಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದಿಂದ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳು, ಗೃಹ ಸಚಿವರು, ಕಾನೂನು ಸಚಿವರಿಗೆ ಮನವಿಯನ್ನು ಅರ್ಪಿಸಲಾಯಿತು.




ಈ ಸಂದರ್ಭದಲ್ಲಿ ರಾಜ್ಯಾಧ್ಯಕ್ಷ ಮಹ್ಮದಶಫಿ ಎಸ್.ನಾಗರಕಟ್ಟಿ ಮಾತನಾಡಿ, ರಾಜ್ಯದಲ್ಲಿ ಶರಣರು, ಸೂಫಿ ಸಂತರು ಮುಂತಾದ ಮಹಾನ್ ವ್ಯಕ್ತಿಗಳ ಜಯಂತಿಯ ಅಂಗವಾಗಿ ಅವರಿಗೆ ಗೌರವ ನೀಡಲು ಸರ್ಕಾರ ಪ್ರಾಣಿವಧೆ ನಿಷೇಧಿಸಿರುವಂತೆ ಈದ್ ಮಿಲಾದ್ ದಿನದಂದು ಸರಕಾರವು ಸಂಪೂರ್ಣವಾಗಿ ಸಾರಾಯಿ ನಿಷೇಧ ಮಾಡಬೇಕು. ಮಾದಕ ವ್ಯಸನಗಳು ಸಮಾಜಕ್ಕೆ ಅಂಟಿದ ಪೀಡೆ. ಇದನ್ನು ಹೋಗಲಾಡಿಸುವುದು ನಮ್ಮೆಲ್ಲರ ಹೊಣೆಗಾರಿಕೆಯಾಗಿದೆ. ಅನಿಷ್ಠ ಸಾರಾಯಿ ಕುಡಿತದಿಂದ ಜನರನ್ನು ತಡೆಯಲು ಪ್ರವಾದಿಗಳು ಸಾಕಷ್ಟು ಶ್ರಮ ಪಟ್ಟಿದ್ದಾರೆ. ಮತ್ತು ಅಂದಿನ ಕಾಲದಲ್ಲಿ ಪ್ರವಾದಿಗಳು ಸರಾಯಿ ನಿಷೇಧಿಸುವಲ್ಲಿ ಯಶಸ್ವಿಯಾಗಿದ್ದರು.

ಅವರ ಈ ಶ್ರಮಕ್ಕೆ ಗೌರವ ನೀಡಲು ಸರ್ಕಾರವು ಈದ್ ಮಿಲಾದ್ ದಿನದಂದು ಸಾರಾಯಿ ನಿಷೇಧ ಮಾಡಬೇಕೆಂದು ಸರಕಾರಕ್ಕೆ ಮನವಿ ಮಾಡಿಕೊಂಡರು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಉಸ್ತುವಾರಿಗಳಾದ ಎಂ.ಡಿ. ಜಾಫರ್ ಡಾಲಾಯತ, ನಿರ್ದೇಶಕ ಎಲ್.ಆರ್. ಕಿತ್ತೂರು, ಮುಸ್ಲಿಂ ಸಮಾಜದ ಮುಖಂಡರಾದ ಯೂಸುಫ್ ನಮಾಜಿ, ಉಮರ್ ಫಾರೂಕ್ ಹುಬ್ಬಳ್ಳಿ, ಮಹ್ಮದ ರಫಿಕ್ ಬಡ್ನಿ, ಯು.ಎಂ. ಮಾಳಿಕೊಪ್ಪ, ಅಲ್ಲಾಭಕ್ಷಿ ಎಫ್.ದೊಡ್ಡಮನಿ, ನಾಸಿರ್ ನರೇಗಲ್, ಕರೀಮ ಸುಣ್ಣಗಾರ, ಮಕ್ತೂಮ್ ಹುಸೇನ್ ಜಮಾದಾರ, ಮುನ್ನಾ ಕಲ್ಮನಿ, ರಿಯಾಜ್ ಶೇಖ್, ಅನ್ವರ್ ನದಾಫ್, ಎ.ಜೆ. ಉಮಚಗಿ, ಅಕ್ಬರಸಾಬ ಅತ್ತಾರ್ ಮುಂತಾದವರಿದ್ದರು.

## ವಿಜ್ಞಾನ ನಾಟಕ ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಇತ್ತೀಚೆಗೆ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ನಡೆದ ಜಿಲ್ಲಾ ಮಟ್ಟದ ವಿಜ್ಞಾನ ನಾಟಕ ಸ್ಪರ್ಧೆಯಲ್ಲಿ ಲಿಟಲ್ ಹಾರ್ಟ್ಸ್ ಇಂಟರ್‌ನ್ಯಾಶನಲ್ ಸ್ಕೂಲ್ ಶಾಲೆಯ ಮಕ್ಕಳು ಉತ್ತಮ ಪ್ರದರ್ಶನ ನೀಡಿ ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಶಾಲೆಯ ವಿದ್ಯಾರ್ಥಿಗಳಾದ ಮೇಘನಾ ಅಂದಲಗಿ ಉತ್ತಮ ನಟಿ ಹಾಗೂ ತೇಜಸ್ವಿನಿ ಅಲ್ಲಯ್ಯನವರಮಠ ಉತ್ತಮ ನಿರ್ದೇಶಕ ಪ್ರಶಸ್ತಿಯನ್ನು ಪಡೆದುಕೊಂಡಿದ್ದಾರೆ. ಮಕ್ಕಳ ಸಾಧನೆಗೆ, ತರಬೇತಿ ನೀಡಿದ ಶಿಕ್ಷಕಿಯರಿಗೆ ಶಾಲಾ ಶಿಕ್ಷಣ ಇಲಾಖೆ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಆರ್.ಎಸ್. ಬುರಡಿ, ಶಿರಹಟ್ಟಿ ತಾಲೂಕಾ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಚ್.ಎನ್. ನಾಣಕಿನಾಯಕ್, ಸಂಸ್ಥೆಯ ಅಧ್ಯಕ್ಷ ರಾಮೇಶ್ವರ ಶಿರಹಟ್ಟಿ, ಮುಖ್ಯೋಪಾಧ್ಯಾಯ ಗಂಗಾಧರ ಶಿರಹಟ್ಟಿ, ಶಿಕ್ಷಕ ವೃಂದದವರು ಹಾಗೂ ಸಿಬ್ಬಂದಿಗಳು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ರುದ್ರಭೂಮಿ ಅಭಿವೃದ್ಧಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿರುವ ವಿವಿಧ ಸಮಾಜಗಳ ರುದ್ರಭೂಮಿಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಗಳಿವೆ. ಅಲ್ಲದೆ ಪುರಸಭೆಯಲ್ಲಿರುವ ಶವ ಸಾಗಣೆ ವಾಹನ ಸಂಪೂರ್ಣ ಶಿಥಿಲಗೊಂಡಿರುವದರಿಂದ ಅದನ್ನು ದುರಸ್ತಿಪಡಿಸುವಂತೆ ಆಗ್ರಹಿಸಿ ಪುರಸಭೆ ಮುಖ್ಯಾಧಿಕಾರಿ ಮಹಾತೇಂಶ ಬೀಳಗಿ ಮನವಿ ಅರ್ಪಿಸಲಾಯಿತು.



ಈ ವೇಳೆ ಮಾತನಾಡಿದ ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಮಾಗಡಿ ಹಾಗೂ ಸಾಮಾಜಿಕ ಕಾರ್ಯಕರ್ತ ಶಂಕರ ಬ್ಯಾಡಗಿ, ಪಟ್ಟಣದ ಹಿರೇಬಣದಲ್ಲಿರುವ ಮಹಾಂತಿನಮಠ ರುದ್ರಭೂಮಿ ತಾಜ್ಯ ವಸ್ತುಗಳನ್ನು ಎಸೆಯುವ ತಾಣವಾಗಿದೆ. ಬೀದಿ ದೀಪ, ಕುಳಿತುಕೊಳ್ಳಲು ಆಸನಗಳು, ನೀರಿನ ವ್ಯವಸ್ಥೆ ಇತ್ಯಾದಿಗಳಿಲ್ಲದೆ ಸಾರ್ವಜನಿಕರು ಪರದಾಡುವಂತಾಗುತ್ತದೆ. ಅಂತೆಯೇ ಮಹಾಂತೀನಮಠದ ರುದ್ರಭೂಮಿಗೆ ಹೊಂದಿಕೊಂಡು ಸರಕಾರಿ ಪ್ರೌಢಶಾಲೆಯಿದ್ದು, ಸುಮಾರು 300ಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಇದಕ್ಕೆ ಯಾವುದೇ ರೀತಿಯ ಭದ್ರತೆ ಇಲ್ಲದೆ, ವಿಷಜಂತುಗಳು ಹೆಚ್ಚುವಂತಾಗಿದೆ. ಕೂಡಲೇ ಇವುಗಳ ಬಗ್ಗೆ ಕ್ರಮ ವಹಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನಾಗರಾಜ ಚಿಂಚಲಿ, ಗಿರೀಶ ಅಗಡಿ, ಹೊನ್ನಪ್ಪ ವಡ್ಡರ, ಶಾಂತಣ್ಣ ಯರ್ಲಗಟ್ಟಿ, ಪ್ರವೀಣ ಯರ್ಲಗಟ್ಟಿ, ನಾರಾಯಣಪ್ಪ ಗಾರ್ಗಿ, ಪ್ರಕಾಶ ಮಾದನೂರ, ಬಸವರಾಜ ಗೋಡಿ, ಮಂಜುನಾಥ. ಒಂಟಿ, ಶಿವಪುತ್ರಪ್ಪ ಯರ್ಲಗಟ್ಟಿ, ಸಿ.ಆರ್. ಲಕ್ಕುಂಡಿಮಠ, ಅಭಯ ಜೈನ, ಪವನ ಬಂಕಾಪುರ, ಸಾಗರ ಕಲಾಲ, ವೀರಭದ್ರಪ್ಪ ಕಲಕೋಟಿ, ಚಂದ್ರಣ್ಣ ಯರ್ಲಗಟ್ಟಿ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka